ಸಂಪುಟ : 10 ಸಂಚಿಕೆ: 278 ಪುಟ : 4+2 ಬೆಲೆ: 3.00 ಶುಕ್ರವಾರ ಡಿಸೆಂಬರ್ 19 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ

Volume : 10 Issue : 278 Pages : 4+2 Price : 3.00 Friday December 19 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25




## ಸಾಮಾಜಿಕ ಬಹಿಷ್ಕಾರ ವಿಧೇಯಕಕ್ಕೆ ತಿದ್ದುಪಡಿ

**■ವಿಜಯಸಾಕ್ಷಿ ಸುದ್ದಿ, ಬೆಳಗಾವಿ ಸುವರ್ಣಸೌಧ**

ಕರ್ನಾಟಕ ಸಾಮಾಜಿಕ ಬಹಿಷ್ಕಾರ (ಪ್ರತಿಬಂಧ, ನಿಷೇಧ ಮತ್ತು ಪರಿಹಾರ) ವಿಧೇಯಕ–2025ಕ್ಕೆ ವಿಧಾನಸಭೆಯಲ್ಲಿ ಸರ್ವಾನುಮತದ ಅಂಗೀಕಾರ ದೊರಕಿತು.

ಬೆಳಗಾವಿ ಸುವರ್ಣ ವಿಧಾನಸೌಧದಲ್ಲಿ ನಡೆಯುತ್ತಿರುವ ಚಳಿಗಾಲದ ವಿಧಾನಮಂಡಲ ಅಧಿವೇಶನದ ಗುರುವಾರದ ವಿಧಾನಸಭೆ ಕಲಾಪದಲ್ಲಿ ಸಮಾಜ ಕಲ್ಯಾಣ ಇಲಾಖೆ ಸಚಿವ ಹೆಚ್.ಸಿ. ಮಹದೇಪ್ಪನವರು ಸಭೆಯ ಅಂಗೀಕಾರ ಕೋರಿ ವಿಧೇಯಕವನ್ನು ಪರ್ಯಾಲೋಚನೆಗೆ ತಂದರು.

ಅಸಾಂವಿಧಾನಿಕ ಆಚರಣೆಗಳಾದ ಜಾತಿ ಪಂಚಾಯಿತಿಗಳು ಹೇರುವ ಸಾಮಾಜಿಕ ಬಹಿಷ್ಕಾರ, ಕಿರುಕುಳ, ವಿವಿಧ ರೀತಿಯ ಶಿಕ್ಷೆಗಳನ್ನು ತಡೆಗಟ್ಟಿ ಸಾಮಾಜಿಕ ಬಹಿಷ್ಕಾರ ಪದ್ಧತಿಯನ್ನು ಸಮಾಜದಿಂದ ನಿರ್ಮೂಲನೆ ಮಾಡುವುದಕ್ಕಾಗಿ ಕರ್ನಾಟಕ ಸಾಮಾಜಿಕ ಬಹಿಷ್ಕಾರ (ಪ್ರತಿಬಂಧ, ನಿಷೇಧ ಮತ್ತು ಪರಿಹಾರ) ವಿಧೇಯಕ–2025ನ್ನು ಸರ್ಕಾರ ಜಾರಿಗೆ ತರುತ್ತಿದೆ ಎಂದು ತಿಳಿಸಿದರು.

ವಿಧೇಯಕ್ಕೆ ಆಡಳಿತ ಹಾಗೂ ವಿರೋಧ ಪಕ್ಷದ ಶಾಸಕರು ಸಮ್ಮತಿ ಸೂಚಿಸಿ ಬೆಂಬಲ ನೀಡಿದರು. ಈ ವೇಳೆ ಶಾಸಕ ಟಿ.ಬಿ. ಜಯಚಂದ್ರ ಮಾತನಾಡಿ, ವಿಧೇಯಕದ 12ನೇ ವಿಧಿಯಲ್ಲಿ ಸಂತ್ರಸ್ತ ಅಥವಾ ಆತನ ಕುಟುಂಬದ ಸದಸ್ಯರು ಪೊಲೀಸರಿಗೆ ಅಥವಾ ನೇರವಾಗಿ ಪ್ರಥಮ ದರ್ಜೆ ನಾಯಿಕ ಮ್ಯಾಜಿಸ್ಟ್ರೇಟರಿಗೆ ದೂರು ದಾಖಲಿಸಲು ಅವಕಾಶ ನೀಡಲಾಗಿದೆ. ವಿಧೇಯಕದ ಪರಿಣಾಮಕಾರಿ ಅನುಷ್ಠಾನಕ್ಕೆ ಅನುಕೂಲವಾಗುವಂತೆ ಸಾಮಾಜಿಕ ಬಹಿಷ್ಕಾರದಂತಹ ಪ್ರಕರಣಗಳು ಬೆಳಕಿಗೆ ಬಂದಾಗ ಪೊಲೀಸರು ಸಹ ಸ್ವಯಂ ಪ್ರೇರಿತವಾಗಿ ದೂರು ದಾಖಲಿಸಲು ವಿಧೇಯಕದಲ್ಲಿ ಅವಕಾಶ ನೀಡಿ ತಿದ್ದುಪಡಿ ತರುವಂತೆ ಸಚಿವ ಹೆಚ್.ಸಿ. ಮಹಾದೇವಪ್ಪನವರಲ್ಲಿ ಕೋರಿದರು. ಅಂತಿಮವಾಗಿ ಪೊಲೀಸರಿಗೆ ಸ್ವಯಂ ಪ್ರೇರಿತ ದೂರು ದಾಖಲಿಸಲು ಅಧಿಕಾರ ನೀಡುವ ತಿದ್ದುಪಡಿಯೊಂದಿಗೆ ವಿಧೇಯಕಕ್ಕೆ ಸರ್ವಾನುಮತದ ಅಂಗೀಕಾರ ದೊರಕಿತು.

### ಇ-ಖಾತಾ ಲೋಕಾರ್ಪಣೆ, ಪೌರಕಾರ್ಮಿಕರಿಗೆ ನೇಮಕಾತಿ ಆದೇಶ, ಮನೆಗಳ ಹಕ್ಕುಪತ್ರ ವಿತರಿಸಿದ ಸಿಎಂ ಸಿದ್ದರಾಮಯ್ಯ

# ಇ–ಖಾತಾ ಮೂಲಕ ಆಸ್ತಿ ದಾಖಲೆ ಸುರಕ್ಷಿತ

**■ವಿಜಯಸಾಕ್ಷಿ ಸುದ್ದಿ, ಬೆಳಗಾವಿ ಸುವರ್ಣಸೌಧ**



ನಗರಾಭಿವೃದ್ಧಿ ಇಲಾಖೆ, ಪೌರಾಡಳಿತ ನಿರ್ದೇಶನಾಲಯ ಹಾಗೂ ಬೆಳಗಾವಿ ಮಹಾನಗರ ಪಾಲಿಕೆ ಸಂಯುಕ್ತ ಆಶ್ರಯದಲ್ಲಿ ಸುವರ್ಣಸೌಧದಲ್ಲಿ ಇ–ಖಾತಾ ಕಾರ್ಯಕ್ರಮಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಗುರುವಾರ ಚಾಲನೆ ನೀಡಿದರು. ಇದೇ ಸಂದರ್ಭದಲ್ಲಿ ಅವರು ಪೌರ ಕಾರ್ಮಿಕರಿಗೆ ನೇಮಕಾತಿ ಆದೇಶ ಪತ್ರಗಳು ಮತ್ತು ಮನೆಯ ಹಕ್ಕುಪತ್ರಗಳ ವಿತರಣೆಗೆ ಚಾಲನೆ ನೀಡಿದರು.

ಇದೇ ವೇಳೆ ಬೆಳಗಾವಿಯ 127 ಪೌರ ಕಾರ್ಮಿಕರಿಗೆ ಖಾಯಂ ನೇಮಕಾತಿ ಆದೇಶ ಪತ್ರ ವಿತರಣೆ ಸಂಬಂಧ ಸಾಂಕೇತಿಕವಾಗಿ 10 ಜನರಿಗೆ ನೇಮಕಾತಿ ಆದೇಶ ಪತ್ರ ನೀಡಲಾಯಿತು, ವಿಜಯಪುರದ ಪೌರ ಕಾರ್ಮಿಕರಿಗೆ ಖಾಯಂ ನೇಮಕಾತಿ ಆದೇಶ ಪತ್ರ ವಿತರಿಸಲಾಯಿತು.

ಸಮಾರಂಭದಲ್ಲಿ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಮಾತನಾಡಿ, ಸಾರ್ವಜನಿಕರ ಆಸ್ತಿ ದಾಖಲೆಯನ್ನು ಮತ್ತಷ್ಟು ಸುರಕ್ಷಿತಗೊಳಿಸುವ ನಿಟ್ಟಿನಲ್ಲಿ ಇ–ಖಾತಾ ಸೇವೆ ಒದಗಿಸಿದ ರಾಜ್ಯ ಸರ್ಕಾರಕ್ಕೆ ಅಭಿನಂದನೆ ತಿಳಿಸುವೆ. ನಗರಾಭಿವೃದ್ಧಿ ಮತ್ತು ನಗರ ಯೋಜನೆಯ ಸಚಿವರು ಉತ್ತಮ ಕಾರ್ಯ ಮಾಡಿದ್ದಾರೆ. ಪೌರ ಕಾರ್ಮಿಕರ ಸೇವೆ ಅನನ್ಯವಾಗಿದ್ದು, ಅವರು ನೆಮ್ಮದಿಯಾಗಿರುವಂತೆ ಪೌರ ಕಾರ್ಮಿಕರಿಗೆ ನೇಮಕಾತಿ ಆದೇಶ ಪತ್ರ ಮತ್ತು ಮನೆಯ ಹಕ್ಕುಪತ್ರ ವಿತರಣೆ ಮಾಡಿರುವುದು ರಾಜ್ಯ ಸರ್ಕಾರ ಮತ್ತು ಪೌರಾಡಳಿತ ಸಚಿವರ ಉತ್ತಮ ಕಾರ್ಯಕ್ಕೆ ಸಾಕ್ಷಿಯಾಗಿದೆ ಎಂದು ತಿಳಿಸಿದರು.

ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರಾದ ಭೈರತಿ ಸುರೇಶ ಮಾತನಾಡಿ, ಇ–ಆಸ್ತಿ ತಂತ್ರಾಂಶದ ಮೂಲಕವೇ ಕಡ್ಡಾಯವಾಗಿ ಇ–ಖಾತಾ ನೀಡಲು 2016ರಲ್ಲಿ ಸುತ್ತೋಲೆ ಹೊರಡಿಸಲಾಗಿದೆ. ಅದರಂತೆ ರಾಜ್ಯದ 320 ನಗರ ಸ್ಥಳೀಯ ಸಂಸ್ಥೆಗಳಲ್ಲಿ ಈವರೆಗೆ ಆಸ್ತಿ ಮಾಲೀಕರು ಇ–ಆಸ್ತಿ ತಂತ್ರಾಂಶದ ಮೂಲಕ ಅಂದಾಜು 29 ಲಕ್ಷ ಇ–ಆಸ್ತಿಗಳಿಗೆ ಇ–ಖಾತಾ ಪಡೆದಿರುತ್ತಾರೆ. ಈ ಅಭಿಯಾನದ ಮುಂದುವರೆದ ಭಾಗವಾಗಿ ಇ–ಆಸ್ತಿ ತಂತ್ರಾಂಶವನ್ನು ಸರಳೀಕರಣಗೊಳಿಸಲಾಗಿದೆ. ಆಸ್ತಿ ಮಾಲೀಕರು ಯಾವುದೇ ಮಧ್ಯವರ್ತಿಗಳಿಲ್ಲದೇ ಹಾಗೂ ಯಾವುದೇ ಅಧಿಕಾರಿ/ಸಿಬ್ಬಂದಿಯನ್ನು ಸಂಪರ್ಕಿಸದೇ ತಮ್ಮ ಮನೆಯಲ್ಲಿ ಕುಳಿತು ಸರಳವಾಗಿ ಸುಲಭವಾಗಿ ಇ–ಖಾತಾ ಪಡೆದುಕೊಳ್ಳಲು ಅವಕಾಶ ಕಲ್ಪಿಸಲಾಗಿದೆ ಎಂದು ತಿಳಿಸಿದರು.

> ಪೌರಕಾರ್ಮಿಕರ ಹೊರಗುತ್ತಿಗೆ ಪದ್ಧತಿಯನ್ನು 2017ರಲ್ಲಿ ಸ್ಥಗಿತಗೊಳಿಸಿ, ಪೌರಕಾರ್ಮಿಕರನ್ನು ನೇರ ನೇಮಕಾತಿ ಮಾಡಿಕೊಳ್ಳಲು ಆದೇಶಿಸಲಾಗಿದೆ. ಕನಿಷ್ಠ 2 ವರ್ಷ ಸೇವೆ ಸಲ್ಲಿಸಿದವರಿಗೆ ವಿಶೇಷ ನೇಮಕಾತಿಯಡಿ ಅವಕಾಶ ನೀಡಲಾಗುತ್ತಿದೆ. ವಿವಿಧ ಹಂತಗಳಲ್ಲಿ ಸಾವಿರಾರು ಪೌರಕಾರ್ಮಿಕರ ನೇಮಕಕ್ಕೆ ಅನುಮತಿ ನೀಡಲಾಗಿದೆ ಎಂದು ಸಚಿವ ಬೈರತಿ ಸುರೇಶ್ ತಿಳಿಸಿದರು.


ಪೌರಾಡಳಿತ ಮತ್ತು ಹಜ್ ಸಚಿವರಾದ ರಹೀಂ ಖಾನ್ ಅವರು ಮಾತನಾಡಿ, ಆಸ್ತಿ ಕಣಜದಲ್ಲಿನ ಮಾಹಿತಿ ಆಧಾರದ ಮೇಲೆ ಕರಡು ಇ–ಖಾತಾವನ್ನು ಪ್ರಕಟಿಸಲಾಗಿದೆ. ನಮೂದಿಸಿದ ಮಾಹಿತಿಯ ನಿಖರತೆಯನ್ನು ನಗರ ಸ್ಥಳೀಯ ಸಂಸ್ಥೆಗಳು ಪರಿಶೀಲಿಸುತ್ತವೆ. ಅಂತಿಮ ಇ–ಖಾತಾವನ್ನು ಸಾರ್ವಜನಿಕರು ಮನೆಯಲ್ಲಿಯೇ ಕುಳಿತು ಪಡೆಯಬಹುದಾಗಿದೆ ಎಂದು ತಿಳಿಸಿದರು.

▸▸3ನೇ ಪುಟಕ್ಕೆ

### ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ನೇತೃತ್ವದಲ್ಲಿ ಎಸ್‌ಸಿಪಿ / ಟಿಎಸ್‌ಪಿ ಪ್ರಗತಿ ಪರಿಶೀಲನಾ ಸಭೆ

# ಫಲಾನುಭವಿಗಳಿಗೆ ನೇರ ಲಾಭ ತಲುಪಿಸಿ

**■ವಿಜಯಸಾಕ್ಷಿ ಸುದ್ದಿ, ಗದಗ**



ಗದಗ ಜಿಲ್ಲಾಡಳಿತ ಭವನದಲ್ಲಿ ಗುರುವಾರ ಪರಿಶಿಷ್ಟ ಜಾತಿ ಉಪ ಯೋಜನೆ (ಎಸ್‌ಸಿಪಿ) ಹಾಗೂ ಪರಿಶಿಷ್ಟ ಪಂಗಡ ಉಪ ಯೋಜನೆ(ಟಿಎಸ್‌ಪಿ)ಗಳ ಪ್ರಗತಿ ಪರಿಶೀಲನಾ ಸಭೆ ಜರುಗಿತು. ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ವಿವಿಧ ಇಲಾಖೆಗಳ ಅನುಷ್ಠಾನ ಪ್ರಗತಿಯನ್ನು ವಿವರವಾಗಿ ಪರಿಶೀಲಿಸಲಾಯಿತು.

ಸಭೆಯಲ್ಲಿ ಎಸ್‌ಸಿಪಿ/ಟಿಎಸ್‌ಪಿ ಯೋಜನೆಗಳಡಿ ನಿಗದಿತ ಗುರಿಗಳನ್ನು ಸಾಧಿಸುವಲ್ಲಿ ಕೆಲವು ಇಲಾಖೆಗಳು ಹಿಂದುಳಿದಿರುವುದು ಗಮನಕ್ಕೆ ಬಂದಿತು. ಈ ಹಿನ್ನೆಲೆಯಲ್ಲಿ ಪ್ರಗತಿ ಸಾಧಿಸದ ಸಂಬಂಧಿತ ಅಧಿಕಾರಿಗಳಿಗೆ ನೋಟಿಸ್ ಜಾರಿಗೊಳಿಸುವಂತೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು. ಯೋಜನೆಗಳ ಉದ್ದೇಶ ಕೇವಲ ಅನುದಾನ ವೆಚ್ಚವಲ್ಲ, ಬದಲಾಗಿ ಅರ್ಹ ಫಲಾನುಭವಿಗಳಿಗೆ ನೇರ ಲಾಭ ತಲುಪಿಸುವುದೇ ಮುಖ್ಯವೆಂದು ಅವರು ಸ್ಪಷ್ಟಪಡಿಸಿದರು.

ಅನುಷ್ಠಾನದಲ್ಲಿ ವಿಳಂಬ, ಗುರಿ ಸಾಧನೆ ಕೊರತೆ ಹಾಗೂ ವರದಿ ಸಲ್ಲಿಕೆಯಲ್ಲಿ ನಿರ್ಲಕ್ಷ್ಯ ವಹಿಸುವ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು. ಮುಂದಿನ ಸಭೆಯೊಳಗೆ ಬಾಕಿ ಉಳಿದ ಕಾಮಗಾರಿಗಳು ಹಾಗೂ ಫಲಾನುಭವಿ ಆಧಾರಿತ ಯೋಜನೆಗಳನ್ನು ಪೂರ್ಣಗೊಳಿಸಿ ಸಮಗ್ರ ವರದಿ ಸಲ್ಲಿಸುವಂತೆ ಸೂಚಿಸಿದರು.

ಎಸ್‌ಸಿಎಸ್‌ಪಿ ಮತ್ತು ಟಿಎಸ್‌ಪಿ ಯೋಜನೆಯಡಿ ವಿವಿಧ ಇಲಾಖೆಗಳ ಅನುಷ್ಠಾನಿತ ಕಾಮಗಾರಿಗಳ ಆರ್ಥಿಕ ಹಾಗೂ ಭೌತಿಕ ಗುರಿ ಸಾಧನೆಗೆ ಕ್ರಮ ವಹಿಸಬೇಕು. ಎಸ್‌ಸಿ/ಎಸ್‌ಟಿ ಕಾಲೋನಿಯಲ್ಲಿ ಬೀದಿ ದೀಪ ಅಳವಡಿಕೆ ಸೇರಿದಂತೆ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ವಿಳಂಬಮಾಡದೇ ಕೈಗೊಳ್ಳಬೇಕು. ಕಾಮಗಾರಿ ಕೈಗೊಳ್ಳುವಾಗ ಗುಣಮಟ್ಟದ ಕಾಯ್ದುಕೊಳ್ಳುವುದು ಹಾಗೂ ಫಲಾನುಭವಿಗಳ ಆಯ್ಕೆಯಲ್ಲಿ ಪಾರದರ್ಶಕತೆ ಮುಖ್ಯವಾಗಿದೆ. ಇಲಾಖೆಯ ಅಧಿಕಾರಿಗಳು ಕಡ್ಡಾಯವಾಗಿ ಸಭೆಗೆ ಹಾಜರಾಗಬೇಕು. ಆಯಾ ಆರ್ಥಿಕ ಸಾಲಿನಲ್ಲಿ ಅನುಷ್ಠಾನಿತ ಕಾಮಗಾರಿಗಳನ್ನು ನಿಗದಿತ ಕಾಲಮಿತಿಯೊಳಗೆ ಪೂರ್ಣಗೊಳಿಸುವತ್ತ ಇಲಾಖೆಯ ಅಧಿಕಾರಿಗಳು ಕ್ರಮ ವಹಿಸಬೇಕು. ಯಾವುದೇ ಕಾರಣಕ್ಕೂ ಬಿಡುಗಡೆಯಾದ ಅನುದಾನ ಲ್ಯಾಪ್ಸ್ ಆಗದಂತೆ ನೋಡಿಕೊಳ್ಳಬೇಕು ಎಂದರು.

> ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಡಾ. ನಂದಾ ಹಣಬರಟ್ಟಿ ಎಸ್‌ಸಿಪಿ/ಟಿಎಸ್‌ಪಿ ಯೋಜನೆಯಡಿ ವಿವಿಧ ಇಲಾಖೆಗಳು ಸಾಧಿಸಿದ ಪ್ರಗತಿ ವರದಿಯನ್ನು ಸಭೆಯಲ್ಲಿ ವಿವರಿಸಿದರು. ಸಭೆಯಲ್ಲಿ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು, ಯೋಜನಾ ಅನುಷ್ಠಾನ ಘಟಕದ ಪ್ರತಿನಿಧಿಗಳು ಉಪಸ್ಥಿತರಿದ್ದು, ಪ್ರಗತಿಯ ವೇಗ ಹೆಚ್ಚಿಸಲು ಅಗತ್ಯ ಕ್ರಮಗಳ ಕುರಿತು ಚರ್ಚಿಸಲಾಯಿತು.

ಈ ಸಂದರ್ಭದಲ್ಲಿ ಜಿ.ಪಂ ಜಂಟಿ ಕೃಷಿ ನಿರ್ದೇಶಕಿ ಚೇತನಾ ಪಾಟೀಲ, ಜಿ.ಪಂ ಅಧಿಕಾರಿ ಎಂ.ವಿ. ಚಳಗೇರಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿ ಎಂ.ಎಂ. ತುಂಬರಮಟ್ಟಿ, ಅಂಗವಿಕಲ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಅಧಿಕಾರಿ ಮಹಾಂತೇಶ್ ಕೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ, ಆಹಾರ ನಾಗರಿಕ ಸರಬರಾಜು ಇಲಾಖೆಯ ಉಪನಿರ್ದೇಶಕ ರಮೇಶ, ನಗರಸಭೆ ಪೌರಾಯುಕ್ತ ರಾಜಾರಾಮ ಪವಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿ ರಾಧಾ ಮಣ್ಣೂರ, ಕಾರ್ಮಿಕ ಇಲಾಖೆ ಅಧಿಕಾರಿ ಶ್ರೀಶೈಲ ಸೋಮನಕಟ್ಟಿ, ಪಶು ಸಂಗೋಪನಾ ಇಲಾಖೆಯ ಉಪನಿರ್ದೇಶಕ ಡಾ. ಎಚ್.ಬಿ. ಹುಲಗಣ್ಣವರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಜರಿದ್ದರು.

### ನೋಂದಣಿ–ಮಾರಾಟ ಪ್ರಕ್ರಿಯೆಗಳೆರಡೂ ಸ್ಥಗಿತ । ಮಾರಾಟಕ್ಕಾಗಿ 2 ದಿನಗಳಿಂದ ಕಾಯುತ್ತಿರುವ ರೈತರು

# ರೈತರು ಮೆಕ್ಕೆಜೋಳ ಬೆಳೆದಿದ್ದೇ ತಪ್ಪಾಯ್ತೇ?

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಮೆಕ್ಕೆಜೋಳದ ಬೆಂಬಲ ಬೆಲೆ ಖರೀದಿ ಕೇಂದ್ರಗಳಲ್ಲಿ ಸದ್ಯ ನೋಂದಣಿ ಮತ್ತು ಮಾರಾಟ ಪ್ರಕ್ರಿಯೆಗಳೆರಡೂ ಸ್ಥಗಿತಗೊಂಡಿದ್ದು, ರೈತರು ಪರದಾಡಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ.

ರೈತರ ಹೋರಾಟದ ಪರಿಣಾಮ ಸರ್ಕಾರದ ಆದೇಶದನ್ವಯ ಲಕ್ಷ್ಮೇಶ್ವರದ ಒಕ್ಕಲುತನ ಹುಟ್ಟುವಳಿ ಮಾರಾಟ ಸಹಕಾರ ಸಂಘದಿಂದ ಎಥೆನಾಲ್, ಪೌಲ್ಟ್ರಿ ಮತ್ತು ಕೆಎಂಎಫ್ ಈ ಮೂರು ಕಂಪನಿಗಳಿಂದ ಖರೀದಿಗೆ ನೋಂದಣಿ ಮಾಡಿಕೊಳ್ಳಲಾಗಿದೆ. ಪ್ರತಿ ಎಕರೆಗೆ 12 ಕ್ವಿಂಟಲ್‌ನಂತೆ ಪ್ರತಿ ರೈತರಿಂದ ಗರಿಷ್ಠ 50 ಕ್ವಿಂಟಲ್‌ನಂತೆ ಎಥೆನಾಲ್ ಕಂಪನಿ ಲಾಗಿನ್‌ನಿಂದ ಒಟ್ಟು 248 ರೈತರು ಮತ್ತು ಪೌಲ್ಟ್ರಿಯಿಂದ 770 ರೈತರು ನೋಂದಣಿ ಮಾಡಿಕೊಂಡಿದ್ದಾರೆ. ಅದರೆ ಪ್ರತಿ ರೈತರಿಂದ ಗರಿಷ್ಠ 20 ಕ್ವಿಂಟಲ್‌ನಂತೆ 650 ರೈತರು ನೋಂದಣಿ ಮಾಡಿಕೊಂಡಿದ್ದು, ಒಟ್ಟು 1668 ರೈತರು ನೋಂದಣಿ ಮಾಡಿಕೊಂಡಿದ್ದಾರೆ.

> ತಿಂಗಳ ಹಿಂದೆಯೇ ಒಕ್ಕಲಿ ಮಾಡಿಟ್ಟುಕೊಂಡಿರುವ ಮೆಕ್ಕೆಜೋಳಕ್ಕೆ ನುಸಿಬಾಧೆ ಆವರಿಸಿಕೊಳ್ಳುತ್ತದೆ ಎಂಬ ಭಯ ಮತ್ತು ಮಾರಾಟ ಮಾಡಲೇಬೇಕಾದ ಅನಿವಾರ್ಯತೆಯಲ್ಲಿ ರೈತರಿದ್ದಾರೆ. ನಮ್ಮ ಹಣೆಬರಹ ಇದ್ದಂತಾಗಲಿ ಎಂದು ದಲ್ಲಾಳಿಗಳಿಗೆ ಮಾರಾಟ ಮಾಡಬೇಕೆಂದರೆ ಅವರೂ ಸಹ ಕಡಿಮೆ ಬೆಲೆಗೆ ಅಂದರೆ ಪ್ರತಿ ಕ್ವಿಂಟಲ್‌ಗೆ 1800 ರೂ.ನಂತೆ ಕೇಳುತ್ತಿದ್ದಾರೆ. ಅತ್ತ ದರಿ–ಇತ್ತ ಪುಲಿ ಎಂಬ ಪರಿಸ್ಥಿತಿಗೆ ಸಿಕ್ಕು ಒದ್ದಾಡುವ ಪರಿಸ್ಥಿತಿಯಲ್ಲಿ ರೈತರಿದ್ದಾರೆ. ಬೀಸೋ ದೊಣ್ಣೆಯಿಂದ ತಪ್ಪಿಸಿಕೊಂಡರಾಯಿತು ಎಂದು ಸರ್ಕಾರ ಜಾಣತನದ ನಿರ್ಧಾರ ಕೈಗೊಂಡು ರೈತರನ್ನು ಹಳ್ಳಕ್ಕೆ ನೂಕಿದೆ ಎಂದು ರೈತರಾದ ಚನ್ನಪ್ಪ ಷಣ್ಮುಕಿ ಅಸಮಾಧಾನ ವ್ಯಕ್ತಪಡಿಸಿದರು.

ಕಳೆದ 10 ದಿನಗಳಿಂದ ಎಲ್ಲ ಕಂಪನಿಗಳ ಲಾಗಿನ್ ಸ್ಥಗಿತಗೊಂಡಿದ್ದರಿಂದ ನೋಂದಣಿ ಸಂಪೂರ್ಣ ಬಂದ್ ಆಗಿದೆ. ಈ ನಡುವೆ ಎಥೆನಾಲ್ ಕಂಪನಿಯಿಂದ ಖರೀದಿ ಪ್ರಕ್ರಿಯೆ ಪ್ರಾರಂಭಿಸಿದ ಟಿಎಪಿಸಿಎಂಎಸ್‌ನವರು ತಾಂತ್ರಿಕ ತೊಂದರೆ, ಕಂಪನಿ/ಸರ್ಕಾರದಿಂದ ಸರಿಯಾದ ನಿರ್ದೇಶನ, ಆದೇಶ ಇಲ್ಲದ್ದರಿಂದ ಕೇವಲ 39 ರೈತ–ರಿಂದ ಖರೀದಿ ಮಾಡಿಕೊಂಡು ಅವರೂ ಕೈಚೆಲ್ಲಿದ್ದಾರೆ. ಕಳೆದ 2/3 ದಿನಗಳಿಂದ ಟ್ರ್ಯಾಕ್ಟರ್‌ಗಳಲ್ಲಿ ಮೆಕ್ಕೆ ಜೋಳ ಹೇರಿಕೊಂಡು ಬಂದು ಹಗಲೂ–ರಾತ್ರಿ ಕಾಯುತ್ತಿದ್ದಾರೆ. ಒಟ್ಟಿನಲ್ಲಿ ರೈತರು ಮೆಕ್ಕೆಜೋಳ ಬೆಳೆದಿದ್ದೇ ತಪ್ಪಾ ಎನ್ನುವಂತಾಗಿದೆ.

ರೈತರ ಮೆಕ್ಕೆಜೋಳವನ್ನು ಬೆಂಬಲ ಬೆಲೆಯಡಿ ಖರೀದಿಸಿ ಹಣ ಪಾವತಿಸಬೇಕಾದ ಜವಾಬ್ದಾರಿಯನ್ನು ಎಥೆನಾಲ್, ಪೌಲ್ಟ್ರಿ, ಕೆಎಂಎಫ್‌ನವರ ಹೆಗಲಿಗೆ ಹೇರಿ ನುಣುಚಿಕೊಂಡಿದೆ. ಆದರೆ ಈಗಾಗಲೇ ಕಡಿಮೆ ▸▸3ನೇ ಪುಟಕ್ಕೆ

# ಅವಘಡಗಳಿಗೆ ಖಾಸಗಿ ಶಾಲೆಗಳೇ ಹೊಣೆ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಖಾಸಗಿ ಶಾಲೆಗಳಲ್ಲಿ ಶಾಲಾ ವಾಹನಗಳ ನಿರ್ವಹಣೆ ಮತ್ತು ಮಕ್ಕಳ ಬಗ್ಗೆ ಕಾಳಜಿಗೆ ಕ್ರಮ ವಹಿಸುವ ನಿಟ್ಟಿನಲ್ಲಿ ಸಂಬಂಧಪಟ್ಟ ಇಲಾಖೆಯವರು ಕಟ್ಟುನಿಟ್ಟಿನ ನಿರ್ದೇಶನ ನೀಡಬೇಕು ಎಂದು ಕರ್ನಾಟಕ ರಕ್ಷಣಾ ವೇದಿಕೆಯ ತಾಲೂಕು ಘಟಕದ ವತಿಯಿಂದ ತಹಸೀಲ್ದಾರ ಧನಂಜಯ ಅವರಿಗೆ ಮನವಿ ಸಲ್ಲಿಸಲಾಯಿತು.


ಮನವಿ ಸಲ್ಲಿಸಿ ಮಾತನಾಡಿದ ಕರವೇ ತಾಲೂಕಾಧ್ಯಕ್ಷ ಲೋಕೇಶ ಸುತಾರ, ಡಿ. 17ರಂದು ದೊಡ್ಡೂರ ಗ್ರಾಮದ ಹೊರವಲಯದಲ್ಲಿ ಶಾಲಾ ವಾಹನದಿಂದ ಬಾಲಕನೋರ್ವ ಬಿದ್ದು ಸಾವನಪ್ಪಿರುವ ದುರ್ಘಟನೆ ನೋವಿನ ಸಂಗತಿ. ಇದು ಖಾಸಗಿ ಶಾಲೆಗಳ ಆಡಳಿತ ಮಂಡಳಿ, ಚಾಲಕ–ನಿರ್ವಾಹಕರ ಬೇಜಾವಾಬ್ದಾರಿಯಿಂದ ನಡೆದ ಘಟನೆಯಾಗಿದೆ. ಶಾಲಾ ವಾಹನಗಳಲ್ಲಿ ನಿಗದಿತ ಸಂಖ್ಯೆಗಿಂತ ದುಪ್ಪಟ್ಟು ಮಕ್ಕಳನ್ನು ತುಂಬಿಸಲಾಗುತ್ತಿದೆ. ಚಾಲನಾ ಪರವಾನಗಿ ಇಲ್ಲದ ಚಾಲಕ–ನಿರ್ವಾಹಕರನ್ನು ನೇಮಿಸಲಾಗಿರುತ್ತದೆ. ವಾಹನಗಳನ್ನು ಸ್ಪರ್ಧೆಗಿಳಿದಂತೆ ಯದ್ವಾಬಿದ್ವಿ ಚಲಾಯಿಸಲಾಗುತ್ತದೆ. ಇದಕ್ಕೆಲ್ಲ ಕಡಿವಾಣ ಹಾಕಬೇಕು. ಎಲ್ಲ ಖಾಸಗಿ ಶಾಲಾ–ಕಾಲೇಜುಗಳಿಗೆ ಶಿಸ್ತುಬದ್ಧ ಕ್ರಮಗಳನ್ನು ಪಾಲಿಸುವಂತೆ ತಾಲೂಕಾಡಳಿತ ಆದೇಶಿಸಬೇಕು. ಮೃತ ವಿದ್ಯಾರ್ಥಿ ಕುಟಂಬಕ್ಕೆ ಸೂಕ್ತ ಪರಿಹಾರ ನೀಡಬೇಕು ಎಂದು ಒತ್ತಾಯಿಸಿದ ಅವರು, ಇಂತಹ ಘಟನೆಗಳು ಸರಕಾರಿ ಬಸ್‌ಗಳಲ್ಲಿ ನಿತ್ಯ ನಡೆಯುತ್ತಿದ್ದು, ಈ ರೀತಿ ದುರ್ಘಟನೆ ನಡೆದರೆ ನೇರವಾಗಿ ಅಧಿಕಾರಿಗಳೇ ಹೊಣೆಗಾರರಾಗುತ್ತಾರೆ ಎಂದರು.

ಈ ವೇಳೆ ಕರವೇ ಕಾರ್ಯಕರ್ತರಾದ ಪ್ರವೀಣ ಗಾಣಗೇರ, ಬಸವರಾಜ ಮಲ್ಲೂರ, ಗಂಗಾಧರ ಕೊಂಚಿಗೇರಿಮಠ, ಅರುಣ ಮೆಕ್ಕಿ, ಪ್ರಕಾಶ ಕೊಂಚಿಗೇರಿಮಠ, ಗಂಗಾಧರ ಕರ್ಜೇಕಣ್ಣವರ, ಗಣೇಶ ಮತ್ತಿತರರಿದ್ದರು.

### ಗೋವಿನ ಜೋಳ ಖರೀದಿ, ನೋಂದಣಿ ಪ್ರಕ್ರಿಯೆ ತ್ವರಿತಗೊಳಿಸುವಂತೆ ಜಿಲ್ಲಾಧಿಕಾರಿಗಳಿಗೆ ಮನವಿ

# ಖರೀದಿಯಲ್ಲಿನ ನ್ಯೂನತೆಗಳನ್ನು ಸರಿಪಡಿಸಿ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**



ಸಮಗ್ರ ರೈತ ಹೋರಾಟ ಸಮಿತಿ ಲಕ್ಷ್ಮೇಶ್ವರ–ಶಿರಹಟ್ಟಿ–ಮುಂಡರಗಿ ವತಿಯಿಂದ ಗುರುವಾರ ಗದಗನಲ್ಲಿ ಜಿಲ್ಲಾಧಿಕಾರಿಗಳನ್ನು ಭೇಟಿ ಮಾಡಿ ಗೋವಿನ ಜೋಳ ಖರೀದಿ ಹಾಗೂ ನೋಂದಣಿ ಪ್ರಕ್ರಿಯೆ ತ್ವರಿತಗೊಳಿಸುವಂತೆ ಮನವಿ ಸಲ್ಲಿಸಲಾಯಿತು.

ಪಟ್ಟಣದಲ್ಲಿ ರೈತರು ಸುಮಾರು 18 ದಿನಗಳ ಕಾಲ ಗೋವಿನ ಜೋಳ ಖರೀದಿ ಕೇಂದ್ರ ಸ್ಥಾಪನೆಗಾಗಿ ಅಹೋರಾತ್ರಿ ಹೋರಾಟ ನಡೆಸಿದ ಹಿನ್ನೆಲೆಯಲ್ಲಿ ಹೋರಾಟಕ್ಕೆ ಮಣಿದ ಸರ್ಕಾರವು ಖರೀದಿ ಕೇಂದ್ರವನ್ನು ಪ್ರಾರಂಭಿಸಿರುವುದಕ್ಕೆ ಜಿಲ್ಲಾಧಿಕಾರಿಗಳನ್ನು ಅಭಿನಂದಿಸಲಾಯಿತು. ಈ ವೇಳೆ ಮಾತನಾಡಿದ ಹೋರಾಟ ಸಮಿತಿ ಮುಖಂಡರಾದ ಮಂಜುನಾಥ ಮಾಗಡಿ, ರವಿಕಾಂತ ಅಂಗಡಿ, ಪೂರ್ಣಾಜಿ ಖರಾಟೆ ಹಾಗೂ ನಾಗರಾಜ ಚಿಂಚಲಿ, ಇದೇ ತಿಂಗಳು 1ನೇ ತಾರೀಕಿನಿಂದ ಖರೀದಿ ಕೇಂದ್ರ ಪ್ರಾರಂಭವಾಗಿದ್ದು, ಖರೀದಿ ಕೇಂದ್ರ ಆರಂಭವಾದ ದಿನದಿಂದಲೇ ಖರೀದಿ ಪ್ರಕ್ರಿಯೆ ಮಂದಗತಿಯಲ್ಲಿ ಸಾಗುತ್ತಿದೆ. ಇದರಿಂದ ರೈತರಿಗೆ ತೀವ್ರ ತೊಂದರೆ ಉಂಟಾಗಿದೆ. ನೊಡಲ್ ಸೆಂಟರ್‌ನಲ್ಲಿ ಕೆಲವೊಂದು ನ್ಯೂನತೆಗಳಿದ್ದು, ಅವುಗಳನ್ನು ಶೀಘ್ರವೇ ಸರಿಪಡಿಸಬೇಕು ಎಂದು ಆಗ್ರಹಿಸಿದರು.

ಪ್ರಸ್ತುತ ದಿನಕ್ಕೆ ಕೇವಲ 10 ರೈತರಿಂದ ಮಾತ್ರ ಗೋವಿನ ಜೋಳ ಖರೀದಿ ನಡೆಯುತ್ತಿದ್ದು, ಇದರಿಂದ ಗೋವಿನ ಜೋಳ ಬೆಳೆದ ಸಾವಿರಾರು ರೈತರ ಗತಿ ಏನಾಗಬೇಕು ಎಂಬ ಪ್ರಶ್ನೆ ಉದ್ಭವಿಸಿದೆ. ಈಗಾಗಲೇ ಸಂಕಷ್ಟದಲ್ಲಿರುವ ರೈತರ ಬದುಕು ಇನ್ನಷ್ಟು ದುಸ್ತರವಾಗುತ್ತಿದೆ. ಲಕ್ಷ್ಮೇಶ್ವರದಲ್ಲಿ ಗೋವಿನ ಜೋಳ ಖರೀದಿ ಕೇಂದ್ರ ಪ್ರಾರಂಭಕ್ಕಾಗಿ ಹಗಲಿರುಳು ಶ್ರಮಿಸಿದ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ. ಪಾಟೀಲ ಹಾಗೂ ಜಿಲ್ಲಾಡಳಿತದ ಪ್ರಯತ್ನಗಳು ವ್ಯರ್ಥವಾಗದೆ, ರೈತರಿಗೆ ಆಶಾಕಿರಣವಾಗಬೇಕು ಎಂದು ಅವರು ಮನವಿ ಮಾಡಿದರು.

> ಮನವಿ ಸ್ವೀಕರಿಸಿದ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಮಾತನಾಡಿ, ಖರೀದಿ ಕೇಂದ್ರದಲ್ಲಿ ವಿಳಂಬವಾಗುತ್ತಿರುವುದರಿಂದ ರೈತರಿಗೆ ತೊಂದರೆಯಾಗುತ್ತಿರುವ ಮಾಹಿತಿ ಲಭ್ಯವಾಗಿದೆ. ಈ ಕುರಿತಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಲಾಗುವದು. ಆದಷ್ಟು ಶೀಘ್ರ ಖರೀದಿ ಪ್ರಕ್ರಿಯೆ ತೀವ್ರಗೊಳ್ಳುವಂತೆ ಮಾಡುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳುವದಾಗಿ ಭರವಸೆ ನೀಡಿದರು.

ಕೇವಲ ನೆಪಕ್ಕೆ ಮಾತ್ರ ಖರೀದಿ ಕೇಂದ್ರವಾಗದೆ, ನಿಜವಾಗಿ ರೈತರ ಬಾಳು ಬೆಳಗುವ ನಿಟ್ಟಿನಲ್ಲಿ ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಬೇಕು. ಕೆಎಂಎಫ್‌ನವರು ಖರೀದಿಸುವ ಗೋವಿನಜೋಳವನ್ನು ಇಲ್ಲಿಯೇ ಖರೀದಿಸಿ ತೆಗೆದುಕೊಂಡು ಹೋಗುವಂತೆ ಆದೇಶ ಮಾಡಬೇಕು. ಇಲ್ಲದಿದ್ದಲ್ಲಿ ರೈತರಿಗೆ ಇದು ಹೆಚ್ಚಿನ ಹೊರೆಯಾಗುತ್ತದೆ. ಖರೀದಿ ಕೇಂದ್ರದಲ್ಲಿ ಇರುವ ನ್ಯೂನತೆಗಳನ್ನು ಆದಷ್ಟು ಶೀಘ್ರ ಸರಿಪಡಿಸಬೇಕು, ಇಲ್ಲದೆ ಇದ್ದಲ್ಲಿ ಮತ್ತೆ ಮುಂದಿನ ದಿನಗಳಲ್ಲಿ ಉಗ್ರ ಹೋರಾಟಕ್ಕೆ ಮುಂದಾಗಬೇಕಾಗುತ್ತದೆ ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಮುತ್ತಣ್ಣ ನೀರಲಗಿ, ಸುರೇಶ್, ಬಸಯ್ಯ ಪೂಜಾರ ಸೇರಿದಂತೆ ಹಲವು ರೈತರು ಹಾಜರಿದ್ದರು.

# ಯುವಜನೋತ್ಸವ ಸ್ಪರ್ಧೆಯಲ್ಲಿ ಸಾಧನೆ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿಯ ಶ್ರೀ ಜಗದ್ಗುರು ಫಕಿರೇಶ್ವರ ಸರಕಾರಿ ಪ್ರಥಮದರ್ಜೆ ಕಾಲೇಜಿನ ವಿದ್ಯಾರ್ಥಿಗಳು ಗದಗ ನಗರದ ಆದರ್ಶ ಶಿಕ್ಷಣ ಸಮಿತಿಯ ಶ್ರೀ ವಿ.ಆರ್. ಕುಷ್ಟಗಿ ಮೆಮೋರಿಯಲ್ ಕಾಲೇಜ್ ಆಫ್ ಕಾಮರ್ಸ್‌ನಲ್ಲಿ ಜರುಗಿದ ಕರ್ನಾಟಕ ವಿಶ್ವ ವಿದ್ಯಾಲಯ ಧಾರವಾಡದ 2025-26ನೇ ಸಾಲಿನ ಗದಗ ಜಿಲ್ಲಾ ವಲಯದ ಯುವಜನೋತ್ಸವ ಸ್ಪರ್ಧೆಗಳಲ್ಲಿ ಭಾಗವಹಿಸಿ ಅತ್ಯುತ್ತಮ ಸಾಧನೆಗೈದು ಶ್ಲಾಘನೆಗೆ ಪಾತ್ರರಾಗಿದ್ದಾರೆ.

ರಸಪ್ರಶ್ನೆ, ಚರ್ಚಾ ಸ್ಪರ್ಧೆ, ಮೆಹೆಂದಿ, ಒನ್ ಆಕ್ಟ್ ಪ್ಲೇಗಳಲ್ಲಿ ಪ್ರಥಮ ಸ್ಥಾನ, ಭಾಷಣ ಸ್ಪರ್ಧೆಯಲ್ಲಿ ದ್ವಿತೀಯ ಸ್ಥಾನವನ್ನು ಪಡೆದು ವಿಶ್ವವಿದ್ಯಾಲಯ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ರಸಪ್ರಶ್ನೆ ಸ್ಪರ್ಧೆಯಲ್ಲಿ ಪ್ರಶಾಂತಗೌಡ ಪಾಟೀಲ, ನಾಗರಾಜ ಜಕ್ಕಲಿ, ಮಂಜಪ್ಪ ಮಳ್ಳಣ್ಣವರ, ಚರ್ಚಾ ಸ್ಪರ್ಧೆಯಲ್ಲಿ ಅರುಂಧತಿ ಛಬ್ಬಿ, ಪ್ರಿಯ ನಾಗುರ, ಮೆಹೆಂದಿ ಸ್ಪರ್ಧೆಯಲ್ಲಿ ಫರಹಾತ್ ಮಕಾದಾರ, ಒನ್ ಆಕ್ಟ್ ಪ್ಲೇನಲ್ಲಿ ಶಿವರಾಜ ಕಾಶಣ್ಣವರ ಮತ್ತು ತಂಡದವರು ಪ್ರಥಮ ಸ್ಥಾನ ಗಳಿಸಿದ್ದಾರೆ.

ಭಾಷಣ ಸ್ಪರ್ಧೆಯಲ್ಲಿ ಮೆಹಬೂಬಿ ಬಾಬಕ್ಕನವರ ದ್ವಿತೀಯ ಸ್ಥಾನವನ್ನು ಗಳಿಸಿದ್ದಾಳೆ. ಕಾಲೇಜಿಗೆ ಕೀರ್ತಿ ತಂದ ವಿದ್ಯಾರ್ಥಿಗಳ ಸಾಧನೆಯನ್ನು ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ಉಮೇಶ್ ಅರಹುಣಸಿ ಹಾಗೂ ಸಿಬ್ಬಂದಿಗಳು ಅಭಿನಂದಿಸಿದ್ದಾರೆ.




**ಶಿರಡಿ ಸಾಯಿಬಾಬಾ ಮಂದಿರದಲ್ಲಿ ಸಂಯೋಜಿಸಿದ್ದ ಕಾರ್ತಿಕೋತ್ಸವ ಧರ್ಮ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು**

# ಸಕಲ ಧರ್ಮಕ್ಕೂ ಮಾನವೀಯತೆ ಮುಕುಟಪ್ರಾಯ



ಶಿರಡಿ ಸಾಯಿಬಾಬಾ ಮಂದಿರದ ಧರ್ಮದರ್ಶಿಗಳಾದ ಮಂಜಯ್ಯ ಹಿರೇಮಠ ಪ್ರಾಸ್ತಾವಿಕವಾಗಿ ಮಾತನಾಡಿ, ಧರ್ಮವನ್ನು ನಾವು ರಕ್ಷಿಸಿದರೆ ಧರ್ಮ ನಮ್ಮನ್ನು ರಕ್ಷಿಸುತ್ತದೆ. ಹಣ್ಣುಗಳ ಭಾರದಿಂದ ಮರ ಬಗ್ಗುತ್ತದೆ. ನೀರು ತುಂಬಿದ ಮೋಡಗಳು ಭೂಮಿಗೆ ಮಳೆಗರೆಯುತ್ತವೆ. ಉತ್ತಮರಲ್ಲಿ ಬೇಕಾದಷ್ಟು ಐಶ್ವರ್ಯವಿರಲಿ, ಅಹಂಕಾರ ಇರುವುದಿಲ್ಲ. ಒಳ್ಳೆ ಅರ್ಥ ತುಂಬಿದ ಮಾತು ಮನುಷ್ಯನಿಗೆ ನಿಜವಾದ ಐಶ್ವರ್ಯ ತಂದುಕೊಡಬಲ್ಲವು. ಶ್ರೀ ರಂಭಾಪುರಿ ಜಗದ್ಗುರುಗಳ ಆಶೀರ್ವಾದ ಬಲದಿಂದ ಎಲ್ಲ ಕಾರ್ಯಕ್ರಮಗಳು ಯಶಸ್ವಿಯಾಗಿ ಜರುಗುತ್ತಿವೆ ಎಂದರು.

■ ವಿಜಯಸಾಕ್ಷಿ ಸುದ್ದಿ, ಬ್ಯಾಡಗಿ

ಜೀವನಾಧಾರಕ್ಕೆ ನೀರು, ಅನ್ನ, ಗಾಳಿ ಮತ್ತು ಒಳ್ಳೆಯ ಮಾತು ಮುಖ್ಯ. ಧರ್ಮವೇ ಜೀವನದ ಜೀವಾಳ. ಮನಕ್ಕೆ ಶಾಂತಿ, ಆತ್ಮಕ್ಕೆ ಆನಂದ ಕೊಡುವುದು ಧರ್ಮ. ಸಕಲ ಧರ್ಮಕ್ಕೂ ದಯೆ ಮತ್ತು ಮಾನವೀಯತೆ ಮುಕುಟಪ್ರಾಯವಾಗಿದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಗುರುವಾರ ನಗರದ ಶಿರಡಿ ಸಾಯಿಬಾಬಾ ಮಂದಿರದಲ್ಲಿ ಸಂಯೋಜಿಸಿದ್ದ ಕಾರ್ತಿಕೋತ್ಸವ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಮನುಷ್ಯನಲ್ಲಿ ಆತ್ಮಬಲ ಬೆಳೆಯಲು ಆಧ್ಯಾತ್ಮದ ಹಸಿವು ಬೇಕು. ಸನ್ಮಾರ್ಗದಲ್ಲಿ ಮುನ್ನಡೆಯುವ ಛಲ ಬೇಕು. ಧರ್ಮ ಮತ್ತು ಸಂಸ್ಕೃತಿಗಳ ಪರಿಪಾಲನೆ ಅಗತ್ಯವಾಗಿದೆ. ಅಶಾಂತಿಯಿಂದ ತತ್ತರಿಸುತ್ತಿರುವ ಇಂದಿನ ದಿನಗಳಲ್ಲಿ ಆತ್ಮಾವಲೋಕನ ಮಾಡಿಕೊಂಡು ಒಳ್ಳೆಯ ದಾ-ರಿಯತ್ತ ನಡೆಯಬೇಕು. ಹೊರಗಿನ ಕತ್ತಲೆ ಕಳೆಯಲು ದೀಪ ಬೇಕು. ಒಳಗಿರುವ ಕತ್ತಲೆ ಕಳೆಯಲು ಗುರುವಿನ ಜ್ಞಾನ ಕಿರಣದ ಅಗತ್ಯವಿದೆ. ಮನುಷ್ಯ ಮನೆ, ಊರು, ಬಟ್ಟೆ, ಸಂಬಂಧ ಮತ್ತು ಸ್ನೇಹಿತರನ್ನು ಬದಲಾಯಿಸುತ್ತಾನೆ. ಆದರೂ ಅವನಿಗೆ ನೆಮ್ಮದಿ ಇಲ್ಲ. ಏಕೆಂದರೆ ಅವನು ತನ್ನನ್ನು ತಾನು ಬದಲಾಯಿಸಿಕೊಳ್ಳುವುದಿಲ್ಲ. ಯಾರಿಗೆ, ಯಾವಾಗ, ಏನು, ಎಷ್ಟು ಕೊಡಬೇಕೆಂಬುದು ಆ ಭಗವಂತನಿಗೆ ಗೊತ್ತು. ಭರವಸೆ ಮತ್ತು ಕನಸುಗಳು ನಮ್ಮ ಕೂದಲು ಮತ್ತು ಉಗುರಿನ ಹಾಗಿರಬೇಕು. ಕತ್ತರಿಸಿದಷ್ಟು ಮತ್ತೆ ಬೆಳೆಯುತ್ತಿರಬೇಕು. ಸಕಲ ಜೀವಾತ್ಮರಲ್ಲಿ ಅಡಗಿರುವ ಪರಮಾತ್ಮ ಒಬ್ಬನೇ ಇದ್ದಾನೆ ಎಂಬ ಉದಾತ್ತ ನಿಲುವನ್ನು ಹೊಂದಿದ ಶಿರಡಿ ಸಾಯಿಬಾಬಾ ಮಂದಿರದಲ್ಲಿ ಪ್ರತಿ ವರುಷ ಕಾರ್ತಿಕ ದೀಪೋತ್ಸವ ಹಾಗೂ ಧರ್ಮ ಸಮಾರಂಭ ಯಶಸ್ವಿಯಾಗಿ ನಡೆಸಿಕೊಂಡು ಬರುತ್ತಿರುವ ಶಿರಡಿ ಸಾಯಿಬಾಬಾ ಮಂದಿರದ ಧರ್ಮದರ್ಶಿ ಹಿರೇಮಠ ಮಂಜಯ್ಯನವರು ತಮ್ಮ ಸೇವೆ ಪರಿಶ್ರಮದಿಂದ ಎಲ್ಲರ ಮೆಚ್ಚುಗೆಗೆ ಪಾತ್ರರಾಗಿದ್ದಾರೆ ಎಂದು ಹರುಷ ವ್ಯಕ್ತಪಡಿಸಿದರು.

ಗುಡ್ಡದ ಮಲ್ಲಾಪುರದ ಮೂಕಪ್ಪ ಶಿವಾಚಾರ್ಯರು, ಮಳಲಿಮಠದ ಡಾ. ನಾಗಭೂಷಣ ಶಿವಾಚಾರ್ಯರು, ಬ್ಯಾಡಗಿ ಚನ್ನಮಲ್ಲಿಕಾರ್ಜುನ ಶ್ರೀಗಳು, ಕೂಡಲದ ಮಹೇಶ್ವರ ಶಿವಾಚಾರ್ಯರು, ಕಡೇನಂದಿಹಳ್ಳಿ ರೇವಣಸಿದ್ಧೇಶ್ವರ ಶಿವಾಚಾರ್ಯರು, ಗುಬ್ಬಿ ನಂಜುಂಡ ಪಂಡಿತಾರಾಧ್ಯ ಶಿವಾಚಾರ್ಯರು, ಸಂಗೊಳ್ಳಿ ಗುರುಲಿಂಗ ಶಿವಾಚಾರ್ಯರು, ಅಡ್ನೂರು ಅಭಿನವ ಪಂಚಾಕ್ಷರ ಶಿವಾಚಾರ್ಯರು, ಅಕ್ಕಿಆಲೂರು ಚಂದ್ರಶೇಖರ ಶಿವಾಚಾರ್ಯರು, ಕುಮಾರಪಟ್ಟಣದ ಜಗದೀಶ್ವರ ಸ್ವಾಮಿಗಳು ಪಾಲ್ಗೊಂಡು ನುಡಿ ನಮನ ಸಲ್ಲಿಸಿದರು. ಸಮಾರಂಭದಲ್ಲಿ ಮಾಜಿ ಪುರಸಭಾಧ್ಯಕ್ಷ ಮುರಿಗೆಪ್ಪ ಶೆಟ್ಟರ್ ಸೇರಿದಂತೆ ಹಲವಾರು ಗಣ್ಯರು ಪಾಲ್ಗೊಂಡು ಶ್ರೀ ರಂಭಾಪುರಿ ಜಗದ್ಗುರುಗಳಿಂದ ಗುರುರಕ್ಷೆ ಸ್ವೀಕರಿಸಿದರು.

ಬಾಳೆಹೊನ್ನೂರು ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲದ ಸಾಧಕರಿಂದ ವೇದಘೋಷ, ಸುಜಾತಾ ಕೊಪ್ಪದ ಇವರಿಂದ ಪ್ರಾರ್ಥನೆ, ಶಿಕ್ಷಕ ಮಹಾದೇವಪ್ಪ ಕರಿಯಣ್ಣನವರಿಂದ ಸ್ವಾಗತ ಜರುಗಿ-ತು. ಸವಣೂರಿನ ಡಾ. ಗುರುಪಾದಯ್ಯ ಸಾಲಿಮಠ ನಿರೂಪಿಸಿದರು. ಇದೇ ಸಂದರ್ಭದಲ್ಲಿ ರಕ್ತದಾನ ಶಿಬಿರ ಜರುಗಿತು. ಬ್ಯಾಡಗಿ ಶಾಸಕರಾದ ಬಸವರಾಜ ಶಿವಣ್ಣನವರ ಇವರ ಅನುದಾನದಲ್ಲಿ ಶಿರಡಿ ಸಾಯಿಬಾಬಾ ಮಂದಿರದ ಪಕ್ಕದಲ್ಲಿ ನಿರ್ಮಾಣಗೊಳ್ಳಲಿರುವ ಶ್ರೀ ಜಗದ್ಗುರು ರೇಣುಕಾಚಾರ್ಯ ಸಮುದಾಯ ಭವನಕ್ಕೆ ಶಿಲಾನ್ಯಾಸ ಶ್ರೀ ರಂಭಾಪುರಿ ಜಗದ್ಗುರುಗಳಿಂದ ನಡೆಯಿತು.

**ಸ್ಲಂ ನಿವಾಸಿಗಳ ವಿವಿಧ ಹಕ್ಕೊತ್ತಾಯಗಳಿಗೆ ಆಗ್ರಹಿಸಿ ಸುವರ್ಣಸೌಧದಲ್ಲಿ ಮನವಿ ಸಲ್ಲಿಕೆ**

# ವಸತಿ ಹಕ್ಕು ಕಾಯ್ದೆ ಜಾರಿಗೆ ಆಗ್ರಹ



ಸಚಿವರು ಮನವಿ ಸ್ವೀಕರಿಸಿ ಮಾತನಾಡಿ, ಖಾಸಗಿ ಮಾಲೀತ್ವದಲ್ಲಿರುವ ಸ್ಲಂ ಪ್ರದೇಶಗಳ ಘೋಷಣೆ, ವಸತಿ ಯೋಜನೆಯ ಸಮರ್ಪಕ ಜಾರಿಗಾಗಿ ಹಾಗೂ ವಸತಿ ಹಕ್ಕು ಕಾಯ್ದೆಯನ್ನು ರಾಜ್ಯದಲ್ಲಿ ಜಾರಿಗೊಳಿಸುವ ಕುರಿತು ಚರ್ಚಿಸಲು ಅಧಿವೇಶನ ಮುಗಿದ ನಂತರ ಬೆಂಗಳೂರಿನಲ್ಲಿ ಉನ್ನತಮಟ್ಟದ ಸಭೆಯನ್ನು ಕರೆಯಲಾಗುವುದು ಎಂದು ಭರವಸೆ ನೀಡಿದರು.

■ ವಿಜಯಸಾಕ್ಷಿ ಸುದ್ದಿ, ಗದಗ

ಬೆಳಗಾವಿಯ ಸುವರ್ಣ ಸೌಧದಲ್ಲಿ ನಡೆಯುತ್ತಿರುವ ಚಳಿಗಾಲದ ಅಧಿವೇಶನದ ಸಂದರ್ಭದಲ್ಲಿ ಸ್ಲಂ ಜನಾಂದೋಲನ ಕರ್ನಾಟಕ ರಾಜ್ಯದ ಸಮಿತಿಯ ಪದಾಧಿಕಾರಿಗಳು ಸ್ಲಂ ನಿವಾಸಿಗಳ ವಸತಿ ಹಕ್ಕು ಕಾಯ್ದೆ ಜಾರಿಗೆ ಆಗ್ರಹಿಸಿ, ಖಾಸಗಿ ಮಾಲಿಕತ್ವದಲ್ಲಿರುವ ಕೊಳಗೇರಿ ಪ್ರದೇಶಗಳನ್ನು ತಕ್ಷಣ ಘೋಷಣೆ ಮಾಡಲು ಹಾಗೂ ವಿವಿಧ ಹಕ್ಕೊತ್ತಾಯಗಳಿಗೆ ಒತ್ತಾಯಿಸಿ ಸುವರ್ಣಸೌಧದಲ್ಲಿ ವಸತಿ ಸಚಿವರಾದ ಜಮೀರ್ ಅಹ್ಮದಖಾನ ಅವರಿಗೆ ಘೇರಾವು ಹಾಕಿ ಮನವಿಯನ್ನು ಸಲ್ಲಿಸಿದರು.

ರಾಜ್ಯ ಸಂಚಾಲಕರಾದ ಎ.ನರಸಿಂಹಮೂರ್ತಿ ಮಾತನಾಡಿ, ರಾಜ್ಯಾದ್ಯಂತ ಬಿಬಿಎಂಪಿ, ಮಹಾನಗರಪಾಲಿಕೆ ಹಾಗೂ ನಗರಸಭೆ ವ್ಯಾಪ್ತಿಯ ಖಾಸಗಿ ಒಡೆತನದಲ್ಲಿರುವ ಸುಮಾರು 709ಕ್ಕೂ ಹೆಚ್ಚು ಸ್ಲಂಗಳಲ್ಲಿ ಅಂದಾಜು 1.8 ಲಕ್ಷ ಕುಟುಂಬಗಳು ಕಳೆದ 50 ವರ್ಷಗಳಿಂದ ಯಾವುದೇ ನಾಗರಿಕ ಸೌಲಭ್ಯಗಳಿಲ್ಲದೇ ವಾಸವಾಗಿದ್ದಾರೆ. ಸರ್ಕಾರದ ಜನವಿರೋಧಿ ಸುತ್ತೋಲೆಯಿಂದ ರಾಜ್ಯದ ಸ್ಲಂ ನಿವಾಸಿಗಳು ಹಕ್ಕುಪತ್ರ ಹಾಗೂ ಮೂಲಭೂತ ಸೌಲಭ್ಯಗಳಿಂದ ವಂಚಿತರಾಗಿದ್ದಾರೆ. ತಕ್ಷಣವೇ ಈ ಜನವಿರೋಧಿ ಸುತ್ತೋಲೆಯನ್ನು ಹಿಂಪಡೆದು ಕೊಳಗೇರಿ ಪ್ರದೇಶಗಳ ಅಭಿವೃದ್ಧಿಗಾಗಿ ಕೆಲಸ ಮಾಡಬೇಕೆಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಸ್ಲಂ ಜನಾಂದೋಲನ-ಕರ್ನಾಟಕ ರಾಜ್ಯ ಸಂಚಾಲಕ ಹಾಗೂ ಗದಗ ಜಿಲ್ಲಾ ಸ್ಲಂ ಅಧ್ಯಕ್ಷ ಇಮ್ತಿಯಾಜ ಆರ್. ಮಾನ್ವಿ, ಸಾವಿತ್ರಿಬಾ ಫುಲೆ ಮಹಿಳಾ ಸಮಿತಿ ಸಂಚಾಲಕಿ ಚಂದ್ರಮ್ಮ, ವಿಭಾಗೀಯ ಸಂಚಾಲಕರಾದ ಜನಾರ್ಧನ ಹಳ್ಳಿಬೆಂಚಿ, ಶೋಭಾ ಕಮತರ, ರೇಣುಕಾ ಯಲ್ಲಮ್ಮ, ಅರುಣ, ವೆಂಕಮ್ಮ, ಸುಧಾ, ರೇಣುಕಾ ಸರಡಗಿ, ಅಕ್ರಮ ಮಸಾಳಕರ, ಫಕ್ಕಿರಪ್ಪ ತಳವಾರ, ಮಂಜುಬಾಯಿ, ಹನುಮಂತ ಕಟ್ಟಿಮನಿ, ಅಶೋಕ ಕುಸಬಿ, ಮೆಹಬೂಬಸಾಬ ಬಳ್ಳಾರಿ, ಖಾಜಾಸಾಬ ಇಸ್ಮಾಯಿಲನವರ, ಬಾಷಾಸಾಬ ಡಂಬಳ, ಶರಣಪ್ಪ ಸೂಡಿ, ರಿಜ್ವಾನ ಮುಲ್ಲಾ ಮುಂತಾದವರು ಉಪಸ್ಥಿತರಿದ್ದರು.

# ಸಾಮೂಹಿಕ ಶ್ರೀ ಸತ್ಯನಾರಾಯಣ ಪೂಜೆ



■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಬೆಳ್ಳಟ್ಟಿಯ ಎಪಿಎಂಸಿ ಸಭಾಭವನದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಹಾಗೂ ಶ್ರೀ ಸತ್ಯನಾರಾಯಣ ಪೂಜಾ ಸಮಿತಿ ಬೆಳ್ಳಟ್ಟಿ ಇವರ ಸಹಯೋಗದೊಂದಿಗೆ ಶ್ರೀ ಸತ್ಯನಾರಾಯಣ ಪೂಜಾ ಕಾರ್ಯಕ್ರಮ ನೆರವೇರಿತು.

ಪೂಜಾ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಮಾತನಾಡಿದ ರಾಮಲಿಂಗೇಶ್ವರ ದಾಸೋಹ ಮಠ ಬೆಳ್ಳಟ್ಟಿಯ ಬಸವರಾಜ ಸ್ವಾಮೀಜಿ, ಮಹಿಳೆಯರ ಆರ್ಥಿಕ ಸಬಲೀಕರಣದಲ್ಲಿ ಧರ್ಮಸ್ಥಳದ ಧರ್ಮಾಧಿಕಾರಿಗಳಾದ ಡಾ. ವೀರೇಂದ್ರ ಹೆಗ್ಗಡೆಯವರ ಗ್ರಾಮಾಭಿವೃದ್ಧಿ ಯೋಜನೆಯ ಸ್ವಸಹಾಯ ಸಂಘವೇ ಮುಖ್ಯ ಕಾರಣ. ಸರ್ಕಾರ ಮಾಡಬೇಕಾದ ಕೆಲಸವನ್ನು ಧರ್ಮಸ್ಥಳದ ಧರ್ಮಧಿಕಾರಿಗಳು ಮಾಡುತ್ತಿದ್ದು, ಸರ್ಕಾರದ ಜನಪರ ಯೋಜನೆಗಳನ್ನು ಧರ್ಮಸ್ಥಳದ ಧರ್ಮಾಧಿಕಾರಿಗಳಿಗೆ ನೀಡಿದಲ್ಲಿ ಶೇ 100ರಷ್ಟು ಅಭಿವೃದ್ಧಿಯಾಗುವಲ್ಲಿ ಸಂಶಯವಿಲ್ಲ ಎಂದರು.

ಸಂಸ್ಥೆಯ ಜಿಲ್ಲಾ ನಿರ್ದೇಶಕ ಕೇಶವ ದೇವಾಂಗ, ಕ್ಷೇತ್ರ ಧರ್ಮಸ್ಥಳದ ಹಿನ್ನೆಲೆ ಹಾಗೂ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಕಾರ್ಯಕ್ರಮಗಳ ಕುರಿತು ಹಾಗೂ ಸಾಮೂಹಿಕ ಶ್ರೀ ಸತ್ಯನಾರಾಯಣ ಪೂಜಾ ಕಾರ್ಯಕ್ರಮದ ಮಹತ್ವದ ಕುರಿತು ಸಮಗ್ರ ಮಾಹಿತಿಯನ್ನು ನೀಡಿದರು.

ಶಿವಪ್ರಕಾಶ ಮಹಾಜನಶೆಟ್ಟರ, ತಿಮ್ಮರೆಡ್ಡಿ ಪಿ.ಮರಡ್ಡಿ ಮಾತನಾಡಿದರು. ಗ್ರಾ.ಪಂ ಅಧ್ಯಕ್ಷ ರಮೇಶ ನಿರ್ವಾಣಶೆಟ್ಟರ, ಮೋಹನ ಗುತ್ತೆಮ್ಮನವರ, ಪರಶುರಾಮ ಮಲ್ಲಾಡದ, ಗಂಗವ್ವ ತಳವಾರ, ತಾಲೂಕಾ ಯೋಜನಾಧಿಕಾರಿ ಪುನೀತ್ ಓಲೇಕಾರ ಮುಂತಾದವರು ಉಪಸ್ಥಿತರಿದ್ದರು.

## ತನ್ನದೇ ಶಾಸಕರ ಅನರ್ಹತೆ ಕೋರಿ ಬಿಆರ್‌ಎಸ್ ಅರ್ಜಿ : ತಿರಸ್ಕರಿಸಿದ ತೆಲಂಗಾಣ ಸ್ಪೀಕರ್

■ ವಿಜಯಸಾಕ್ಷಿ ಸುದ್ದಿ, ತೆಲಂಗಾಣ

ಆಡಳಿತಾರೂಢ ಕಾಂಗ್ರೆಸ್‌ಗೆ ನಿಷ್ಠೆ ಬದಲಾಯಿಸಿದ್ದಾರೆಂದು ಹೇಳಲಾದ ಹತ್ತು ಬಿಆರ್‌ಎಸ್ ಶಾಸಕರನ್ನು ಅನರ್ಹಗೊಳಿಸುವಂತೆ ಕೋರಿದ್ದ ಅರ್ಜಿಗಳ ಪೈಕಿ ಐದು ಅರ್ಜಿಗಳನ್ನು ತೆಲಂಗಾಣ ವಿಧಾನಸಭೆಯ ಸ್ಪೀಕರ್ ಗದ್ದಂ ಪ್ರಸಾದ್ ಕುಮಾರ್ ಬುಧವಾರ (ಡಿಸೆಂಬರ್ 18) ತಿರಸ್ಕರಿಸಿದ್ದಾರೆ.

ಶಾಸಕರ ಅನರ್ಹತೆ ಅರ್ಜಿಗಳ ಮೇಲಿನ ಆದೇಶಗಳನ್ನು ಪ್ರಕಟಿಸಿದ ಸ್ಪೀಕರ್, ಐವರು ಶಾಸಕರು ಬಿಆರ್‌ಎಸ್‌ನಿಂದ ಕಾಂಗ್ರೆಸ್‌ಗೆ ಔಪಚಾರಿಕವಾಗಿ ಪಕ್ಷಾಂತರಗೊಂಡಿದ್ದಾರೆ ಎಂಬುದಕ್ಕೆ ಅರ್ಜಿದಾರರು ಪುರಾವೆಗಳನ್ನು ಒದಗಿಸಲು ವಿಫಲರಾಗಿದ್ದಾರೆ ಎಂದು ಹೇಳಿದ್ದಾರೆ.

## ಸರ್ಕಾರಗಳು ಜನಾಭಿಪ್ರಾಯಕ್ಕೆ ಮನ್ನಣೆ ನೀಡಲಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಉತ್ತರ ಕರ್ನಾಟಕದ ಬೆಳಗಾವಿ, ಬಿಜಾಪುರ, ಹುಬ್ಬಳ್ಳಿಯ ವಿಮಾನ ನಿಲ್ದಾಣಗಳಿಗೆ ಜಗಜ್ಯೋತಿ ಶ್ರೀ ಬಸವಣ್ಣನವರು, ವೀರರಾಣಿ ಕಿತ್ತೂರು ಚನ್ನಮ್ಮ, ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನವರ ಹೆಸರಿಡಬೇಕೆಂಬ ಜನಾಭಿಪ್ರಾಯಕ್ಕೆ ರಾಜ್ಯ ಮತ್ತು ಕೇಂದ್ರ ಸರ್ಕಾರ ಮನ್ನಣೆ ನೀಡಬೇಕು ಎಂದು ಶಿರಹಟ್ಟಿ/ಬಾಲೆಹೊಸೂರ ಮಠದ ಶ್ರೀ ಫಕೀರ ದಿಂಗಾಲೇಶ್ವರ ಜಗದ್ಗುರುಗಳು ಹೇಳಿದ್ದಾರೆ.

ಈ ಕುರಿತು ಶ್ರೀಗಳು ಪತ್ರಿಕಾ ಹೇಳಿಕೆ ನೀಡಿ, ಈಗಾಗಲೇ ಈ ವಿಷಯದ ಬಗ್ಗೆ ವಿಧಾನಮಂಡಲದಲ್ಲಿ ಪ್ರಸ್ತಾಪಿಸಿ ಕೇಂದ್ರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ತಿಳಿದುಬಂದಿದೆ.

ನಾಡಿನ ಕಲ್ಯಾಣ, ಶ್ರೇಯೋಭಿವೃದ್ಧಿಗಾಗಿ ತಮ್ಮನ್ನೇ ಸಮರ್ಪಿಸಿಕೊಂಡ ಇಂತಹ ಮಹನೀಯರ ಹೆಸರಿಡುವ ಮೂಲಕ ಅವರ ಜೀವನಾದರ್ಶ, ತತ್ವ, ಸಿದ್ಧಾಂತ, ಮೌಲ್ಯಗಳನ್ನು ಜಗತ್ತಿಗೆ ಪಸರಿಸಲು ಸಾಧ್ಯವಾಗುತ್ತದೆ. ಈ ನಿಟ್ಟಿನಲ್ಲಿ ರಾಜ್ಯ-ಕೇಂದ್ರದ ನಾಯಕರು ಗಮನ ಹರಿಸಬೇಕು ಎಂದಿದ್ದಾರೆ.



## ಕೃಷಿ ಸಹಕಾರ ಸಂಘಗಳಿಗೆ ಹಣ ಬಿಡುಗಡೆ: ಶಾಸಕ ಕುಣಿಗಲ್ ರಂಗನಾಥ್ ವಿರುದ್ಧ ಕೆ.ಎನ್. ರಾಜಣ್ಣ ವಾಗ್ದಾಳಿ

■ ವಿಜಯಸಾಕ್ಷಿ ಸುದ್ದಿ, ಬೆಳಗಾವಿ

ಕೃಷಿ ಸಹಕಾರ ಸಂಘಗಳಿಗೆ ಹಣ ಬಿಡುಗಡೆ ಮಾಡುವುದನ್ನು ಮಾಜಿ ಸಹಕಾರಿ ಸಚಿವ ಕೆ.ಎನ್. ರಾಜಣ್ಣ ಗುರುವಾರ ಬಲವಾಗಿ ಸಮರ್ಥಿಸಿಕೊಂಡಿದ್ದಾರೆ. ಆಡಳಿತ ಪಕ್ಷದೊಳಗಿನ ಸಾರ್ವಜನಿಕ ಭಿನ್ನಾಭಿಪ್ರಾಯದ ನಡುವೆಯೂ, "ಸಂಘಗಳಿಗೆ ವಿತರಿಸಲಾದ ನಿಧಿ ಠೇವಣಿದಾರರ ಹಣ, ಅದು ಸರ್ಕಾರದ ಅನುದಾನವಲ್ಲ" ಎಂದು ಹೇಳಿದರು.

"ಮುಂದಿನ ದಿನಗಳಲ್ಲಿ ನಾವು ಇನ್ನೂ ಹೆಚ್ಚಿನ ಹಣ ನೀಡುತ್ತೇವೆ. ಅದನ್ನು ಕೇಳಲು ಅವರು ಯಾರು" ಎಂದು ಕೆಎನ್ ರಾಜಣ್ಣ ಅವರು ಕುಣಿಗಲ್ ಕಾಂಗ್ರೆಸ್ ಶಾಸಕ ರಂಗನಾಥ್ ಅವರನ್ನು ಪ್ರಶ್ನಿಸಿದರು.

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಆಪ್ತ ಶಾಸಕರಾದ ರಂಗನಾಥ್, ತಮ್ಮ ಕ್ಷೇತ್ರದ ರೈತರಿಗೆ ತಾರತಮ್ಯ ಮಾಡಲಾಗುತ್ತಿದೆ ಎಂದು ಆರೋಪಿಸಿದರು.

ಆದರೆ, ರಂಗನಾಥ್ ಅವರ ದುರುಪಯೋಗದ ಆರೋಪಗಳನ್ನು ತಿರಸ್ಕರಿಸಿದ ರಾಜಣ್ಣ, "ಇದು ನನ್ನ ಹಣವಲ್ಲ, ನನ್ನ ವೈಯಕ್ತಿಕ ಹಣವಲ್ಲ, ಸರ್ಕಾರದ ಹಣವಲ್ಲ. ಇದು ಠೇವಣಿದಾರರ ಹಣ. ಜಿಲ್ಲೆಯ ರೈತರು ಮತ್ತು ಠೇವಣಿ ಇಟ್ಟಿರುವ ಎಲ್ಲರಿಗೂ ನಾನು ಅದನ್ನು ನೀಡುತ್ತೇನೆ. ಭವಿಷ್ಯದಲ್ಲಿ ಎರಡು ಪಟ್ಟು ಹೆಚ್ಚು ವಿತರಿಸುತ್ತೇವೆ. ನನ್ನ ಕ್ಷೇತ್ರದಲ್ಲಿ ಶೇ.75 ರಷ್ಟು ದಲಿತರಿದ್ದಾರೆ. ಕುಣಿಗಲ್‌ನಲ್ಲಿ ಶೇ.75ರಷ್ಟು ಒಕ್ಕಲಿಗರಿದ್ದಾರೆ. ನಾವು ಸಿದ್ದರಾಮಯ್ಯ ಅವರ ಸಾಮಾಜಿಕ ನ್ಯಾಯ ತತ್ವವನ್ನು ಪಾಲಿಸುತ್ತಿದ್ದೇವೆ" ಎಂದರು.

ಸರ್ಕಾರವು ದೊಡ್ಡ ಅನುದಾನ ಬಿಡುಗಡೆ ಮಾಡಿದೆ ಎಂಬ ಹೇಳಿಕೆಗಳನ್ನು ರಾಜಣ್ಣ ನಿರಾಕರಿಸಿದರು. "ಅವರು ವೈಯಕ್ತಿಕವಾಗಿ ನನಗೆ 1,000 ಕೋಟಿ ರೂ. ನೀಡಿದ್ದಾರೆಯೇ" ಎಂದು ಅವರು ಕೇಳಿದರು. ನಿರ್ದಿಷ್ಟ ಪ್ರದೇಶಗಳಿಗೆ ನಿಧಿ ಹಂಚಿಕೆಯನ್ನು ಸಮರ್ಥಿಸಿಕೊಂಡ ರಾಜಣ್ಣ, ಮಧುಗಿರಿ ತಾಲ್ಲೂಕಿನಲ್ಲಿ ಬಿಡುಗಡೆಯಾದ ಸರ್ಕಾರಿ ಹಣವು ಸ್ಥಳೀಯ ಜನರಿಗೆ ಮೀಸಲಾಗಿದೆ ಎಂದು ಹೇಳಿದರು.

**ಚಿತ್ರಕಲಾ ಶಿಕ್ಷಕರಿಗೆ ಹಮ್ಮಿಕೊಂಡಿದ್ದ ಕಾರ್ಯಾಗಾರವನ್ನು ಉದ್ಘಾಟಿಸಿದ ಜಿ.ಎಂ. ಮುಂದಿನಮನಿ ಅಭಿಮತ**

# ಒಂದು ಚಿತ್ರ ಸಾವಿರ ಶಬ್ದಗಳಿಗೆ ಸಮ

■ ವಿಜಯಸಾಕ್ಷಿ ಸುದ್ದಿ, ಗದಗ

ಜಗತ್ತಿನಲ್ಲಿ ಯಾವುದೇ ಒಂದು ವಸ್ತು ಸೃಷ್ಟಿಯಾಗಬೇಕಾದರೆ ಅದಕ್ಕೆ ಮನಸ್ಥಿತಿ, ಬೌದ್ಧಿಕ ಸ್ಥಿತಿ ಮತ್ತು ದೈಹಿಕ ಸ್ಥಿತಿ ಬಹಳ ಮುಖ್ಯವಾಗಿದೆ. ಕಲಾವಿದರನ್ನು ಭೂಲೋಕದ ಸೃಷ್ಟಿಕರ್ತರು ಎನ್ನಬಹುದು. ಅವರು ದೂರದೃಷ್ಟಿ ಮತ್ತು ಅಂತರದೃಷ್ಟಿ ಉಳ್ಳವರು. ಅವರಿಂದ ಭಿನ್ನವಾದ ಸೃಷ್ಟಿ ಸಾಧ್ಯ ಎಂದು ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ (ಡಯಟ್) ಪ್ರಾಚಾರ್ಯ ಜಿ.ಎಂ. ಮುಂದಿನಮನಿ ಅಭಿಪ್ರಾಯಪಟ್ಟರು.




ಅಧ್ಯಕ್ಷತೆ ವಹಿಸಿ ಮಾತನಾಡಿದ ಜಿಲ್ಲಾ ಚಿತ್ರಕಲಾ ಶಿಕ್ಷಕರ ಸಂಘದ ಅಧ್ಯಕ್ಷ ವಿಜಯ ಕಿರೇಸೂರ, ರಾಜ್ಯದಲ್ಲಿಯೇ ಈ ರೀತಿಯ ಗ್ರೇಡ್ ಮಕ್ಕಳಿಗೆ ಪ್ರೋತ್ಸಾಹಿಸುವ ತರಬೇತಿ ನೀಡುವ ಪ್ರಯತ್ನ ಮೊದಲು. ಈ ಪ್ರಯತ್ನದಿಂದ ಮಕ್ಕಳಲ್ಲಿ ಉತ್ಸಾಹ ಮೂಡಿ ಹೆಚ್ಚು ಕ್ರಿಯಾಶೀಲರಾಗುವಂತೆ ಮಾಡುವುದರಲ್ಲಿ ಸಂದೇಹವಿಲ್ಲ. ಜಗತ್ತಿನಲ್ಲಿ ಚಿತ್ರಕಲೆಗೆ ವಿಶಿಷ್ಟ ಸ್ಥಾನವಿದ್ದು, ಇದನ್ನು ಪ್ರಾಥಮಿಕ ಹಂತದಲ್ಲಿಯೇ ಮಕ್ಕಳಿಗೆ ಕಲಿಸುವದರಿಂದ ಪ್ರಯೋಗಾತ್ಮಕ ಕಲಿಕೆಗೆ ನೈಜ ಅರ್ಥ ಬರುತ್ತದೆ ಎಂದು ಹೇಳಿದರು.

ನಗರದ ವಿಜಯ ಕಲಾಮಂದಿರದಲ್ಲಿ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ವತಿಯಿಂದ ಹೈಯರ್/ಲೋವರ್ ಗ್ರೇಡ್ ಪರೀಕ್ಷೆಗೆ ಕುಳಿತುಕೊಳ್ಳುವ ಮಕ್ಕಳನ್ನು ತರಬೇತಿಗೊಳಿಸಲು ಮತ್ತು ಹೆಚ್ಚು ಅಂಕ ಪಡೆಯಲು ನೆರವಾಗುವಂತೆ ಗದಗ ಜಿಲ್ಲೆಯ ಚಿತ್ರಕಲಾ ಶಿಕ್ಷಕರಿಗೆ ಹಮ್ಮಿಕೊಂಡಿದ್ದ ಒಂದು ದಿನದ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ಮಕ್ಕಳಲ್ಲಿ ಸೃಜನಶೀಲತೆ ಮತ್ತು ಕಲಾತ್ಮಕತೆಯನ್ನು ಹೊರಸೂಸುವಂತೆ ಮಾಡುವ ಶಕ್ತಿ ಮತ್ತು ಕುಶಲತೆ ಚಿತ್ರಕಲಾ ಶಿಕ್ಷಕರಿಗೆ ಇದೆ. ಒಂದು ಚಿತ್ರ ಸಾವಿರ ಶಬ್ದಗಳಿಗೆ ಸಮ. ಪಠ್ಯಕ್ಕಿಂತಲೂ ಮಕ್ಕಳಿಗೆ ಚಿತ್ರಗಳು ಮಸ್ತಕದಲ್ಲಿ ಉಳಿಸಿಯುತ್ತವೆ ಎಂದು ಹೇಳಿದರು.

ಡಯಟ್‌ನ ಹಿರಿಯ ಉಪನ್ಯಾಸಕರಾದ ಯಲ್ಲಪ್ಪ ಹಂದ್ರಾಳ ಮಾತನಾಡಿ, ಲಲಿತಕಲೆಗಳನ್ನು ಕಲಿಸುವುದರಿಂದ ಮಕ್ಕಳನ್ನು ವಿಭಿನ್ನವಾಗಿ ಯೋಚಿಸುವಂತೆ ಮತ್ತು ಕಾರ್ಯತತ್ಪರವಾಗುವಂತೆ ಮಾಡಬಹುದು. ಆದ್ದರಿಂದ ಕಲೆಗಳಿಗೆ ಮಕ್ಕಳನ್ನು ತೊಡಗಿಸಿ ಪ್ರೋತ್ಸಾಹಿಸಬೇಕು ಎಂದರು.

ಡಯಟ್‌ನ ಉಪನ್ಯಾಸಕರು ಮತ್ತು ಪ್ರವಾಸೋದ್ಯಮ ಇಲಾಖೆಯ ಸಹನಿರ್ದೇಶಕರಾದ ಕೊಟ್ರೇಶ ವಿಭೂತಿ ಮಾತನಾಡಿ, ಮಕ್ಕಳಿಗೆ ದೇಶದ ಪರಂಪರೆ ಹಾಗೂ ಕಲಾತ್ಮಕ, ಐತಿಹಾಸಿಕ ತಾಣಗಳ ಪರಿಚಯವನ್ನು ಮಾಡುವುದು ಮತ್ತು ಅವುಗಳನ್ನು ಆಳವಾಗಿ ತಿಳಿದುಕೊಳ್ಳುವಂತೆ ಮಾಡುವ ಕಾರ್ಯದಲ್ಲಿ ಚಿತ್ರಕಲಾ ಶಿಕ್ಷಕರ ಪಾತ್ರ ಮಹತ್ವದ್ದಾಗಿದೆ ಎಂದರು.

ವಿಜಯಕಲಾ ಮಂದಿರದ ಪ್ರಾಚಾರ್ಯ ಕೃಷ್ಣಾ ಕೆ.ಎಂ ಮಾತನಾಡಿ, ಇಂದಿನ ತಂತ್ರಜ್ಞಾನ ಯುಗದಲ್ಲಿ ಕಲಾತ್ಮಕತೆಯ ಪರಿಚಯ ಎಲ್ಲರಿಗೂ ಆಗಬೇಕು ಮತ್ತು ಇದರಿಂದ ಮನುಷ್ಯ ಈ ದಿನಕ್ಕೆ ಹೊಂದಿಕೊಂಡು ವಿಶಿಷ್ಟಪೂರ್ಣ ಎನಿಸಬಲ್ಲ ಎಂದರು.

ವಿಜಯಕಲಾ ಮಂದಿರದ ಮುಖ್ಯಸ್ಥ ಪ್ರಕಾಶ ಅಕ್ಕಿ, ಮೊರಾರ್ಜಿ ವಸತಿ ಶಾಲೆಗಳ ಚಿತ್ರಕಲಾ ಅಧ್ಯಕ್ಷ ರಮಜಾನ್ ಮುತ್ತಣ್ಣವರ ಮಾತನಾಡಿದರು. ಟಿ.ಆರ್. ಬೇವಿನಮರದ, ಸರೋಜಾ ಮುಂಡೇವಾಡಿ, ಶಾರದಾ ಪರ್ವತಿ, ಕೆ.ಬಿ. ಬಡಿಗೇರ, ಮಹೇಶ ಹಿರೇಗೌಡರ, ಜೆ.ಕೆ. ಬಾಗವಾನರ, ವಿಜಯ ಕಿರೇಸೂರ ಮುಂತಾದವರು ಉಪನ್ಯಾಸ ನೀಡಿದರು. ಗದುಗಿನ ಚಿತ್ರಕಲಾ ಶಿಕ್ಷಕರ ಸಂಘದ ಕಾರ್ಯದರ್ಶಿ ಅಶೋಕ ಬಾವಿ, ಶರಣಯ್ಯ ವಸ್ತ್ರದ, ನಾಗರಾಜ ಚಿತ್ರಗಾರ, ಮಹೇಶ ಸಂದಿಗೋಡ ಮತ್ತು ಜಿಲ್ಲೆಯ ಎಲ್ಲ ಚಿತ್ರಕಲಾ ಶಿಕ್ಷಕರು ಭಾಗವಹಿಸಿ ಕಾರ್ಯಾಗಾರ ಯಶಸ್ವಿಗೊಳಿಸಿದರು. ಪಂಚಾಕ್ಷರಿ ಹಿರೇಮಠ ನಿರೂಪಿಸಿದರು. ತೋಂಟೇಶ ಬೇವಿನಮರದ ಸ್ವಾಗತಿಸಿ ವಂದಿಸಿದರು.

## 'ಕರ್ಮಶ್ರೀ' ಯೋಜನೆಗೆ ಮಹಾತ್ಮ ಗಾಂಧಿ ಹೆಸರಿಡುವುದಾಗಿ ಘೋಷಿಸಿದ ಮಮತಾ ಬ್ಯಾನರ್ಜಿ



■ವಿಜಯಸಾಕ್ಷಿ ಸುದ್ದಿ, ಕೋಲ್ಕತ್ತಾ

ಪಶ್ಚಿಮ ಬಂಗಾಳ ಸರ್ಕಾರದ ಉದ್ಯೋಗ ಖಾತರಿ ಯೋಜನೆ 'ಕರ್ಮಶ್ರೀ'ಯನ್ನು ಮಹಾತ್ಮ ಗಾಂಧಿ ಹೆಸರಿನಲ್ಲಿ ಮರುನಾಮಕರಣ ಮಾಡುವುದಾಗಿ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಗುರುವಾರ (ಡಿಸೆಂಬರ್ 18) ಘೋಷಿಸಿದ್ದಾರೆ.

ನರೇಗಾ ಯೋಜನೆಯಿಂದ ಮಹಾತ್ಮಾ ಗಾಂಧಿಯವರ ಹೆಸರನ್ನು ಕೈಬಿಟ್ಟಿರುವುದಕ್ಕೆ ನನಗೆ ನಾಚಿಕೆಯಾಗುತ್ತಿದೆ ಎಂದ ಮಮತಾ ಬ್ಯಾನರ್ಜಿ, ರಾಷ್ಟ್ರಪಿತನಿಗೆ ಅವರು ಗೌರವ ಸಲ್ಲಿಸದಿದ್ದರೆ ನಾನು ಸಲ್ಲಿಸುತ್ತೇನೆ ಎಂದು ಹೇಳಿದ್ದಾರೆ.

ಕೋಲ್ಕತ್ತಾದ ಧೋನೋ ಧನ್ಯೋ ಸಭಾಂಗಣದಲ್ಲಿ ನಡೆದ ವ್ಯಾಪಾರ ಮತ್ತು ಕೈಗಾರಿಕಾ ಸಮಾವೇಶದಲ್ಲಿ ಅವರು ಈ ಮಾತುಗಳನ್ನಾಡಿದ್ದಾರೆ.

ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ 'ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಕಾಯ್ದೆ (ಎಂಜಿಎನ್‌ಆರ್‌ಇಜಿಎ)'ಯ ಹೆಸರು ಮತ್ತು ನಿಬಂಧನೆಗಳನ್ನು ಬದಲಿಸುವ 'ವಿಕಸಿತ್ ಭಾರತ್ ಗ್ಯಾರಂಟಿ ಫಾರ್ ರೋಜ್‌ಗಾರ್ ಅಂಡ್ ಅಜೀವಿಕ ಮಿಷನ್ (ಗ್ರಾಮೀಣ್ ) 2025 (ವಿಬಿ-ಜಿ ರಾಮ್-ಜಿ) ಎಂಬ ಹೊಸ ಮಸೂದೆಗೆ ಗುರುವಾರ (ಡಿಸೆಂಬರ್ 18) ಲೋಕಸಭೆಯ ಅನುಮೋದನೆ ಪಡೆದಿದೆ.

ಈ ಮಸೂದೆ 2005ರಲ್ಲಿ ಕಾಂಗ್ರೆಸ್ ನೇತೃತ್ವದ ಯುಪಿಎ ಸರ್ಕಾರ ಜಾರಿಗೆ ತಂದ ನರೇಗಾ ಕಾಯ್ದೆ ಮತ್ತು ಯೋಜನೆಯ ಹೆಸರು, ನಿಬಂಧನೆಗಳನ್ನು ಬದಲಿಸಲಿದೆ. ಮುಖ್ಯವಾಗಿ ಯೋಜನೆಯಿಂದ ಮಹಾತ್ಮ ಗಾಂಧಿಯವರ ಹೆಸರನ್ನು ತೆಗೆದು ಹಾಕಲಿದೆ.

ನರೇಗಾ ಕಾಯ್ದೆಯ ಹೆಸರು ಬದಲಿಸಿರುವ ಕೇಂದ್ರ ಕೆಲಸದ ದಿನಗಳನ್ನು 100ರಿಂದ 125ಕ್ಕೆ ಹೆಚ್ಚಳ ಮಾಡುವುದಾಗಿ ಹೇಳಿದೆ.

### 49ನೇ ದಿನದ ಕಾರ್ಖಾನೆ ವಿರೋಧಿ ಹೋರಾಟಕ್ಕೆ ಇನ್ನರ್ ವ್ಹೀಲ್ ಶಕ್ತಿ

# ಕಾರ್ಖಾನೆ ವಿಷ ನಪುಂಸಕತೆಗೆ ಕಾರಣವಾಗುತ್ತಿದೆ

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಕಾರ್ಖಾನೆಗಳ ತ್ಯಾಜ್ಯ ಭೂಗರ್ಭವನ್ನು ವಿಷಗೊಳಿಸುತ್ತಿದೆ, ನದಿಯನ್ನು ವಿಷಗೊಳಿಸುತ್ತಿದೆ, ಅದರ ಮೂಲಕ ಇಲ್ಲಿನ ನೀರು, ಗಾಳಿ ಮತ್ತು ಮಣ್ಣು ವಿಷ ಮತ್ತು ಮಾಲಿನ್ಯಗೊಂಡು ಇಲ್ಲಿನ ಜನರು ಬಂಜೆತನ ಮತ್ತು ನಪುಂಸಕತೆಯನ್ನು ಹೆಚ್ಚು ಮಾಡುತ್ತಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಅವರು ಕೊಪ್ಪಳ ಜಿಲ್ಲಾ ಬಚಾವೋ ಆಂದೋಲನ ಸಮಿತಿ ಹಾಗೂ ಪರಿಸರ ಹಿತರಕ್ಷಣಾ ವೇದಿಕೆಯ ಜಂಟಿ ಕ್ರಿಯಾ ವೇದಿಕೆ ನಡೆಸುತ್ತಿರುವ ಅನಿರ್ಧಿಷ್ಟ ಧರಣಿಯ 49ನೇ ದಿನದ ಪ್ರತಿಭಟನೆಯಲ್ಲಿ ಭಾಗವಹಿಸಿ ಮಾತನಾಡಿದರು.

ಕಾರ್ಖಾನೆ ವಿರೋಧಿ ಹೋರಾಟದಲ್ಲಿ ಜನಸಾಮಾನ್ಯರ ಜೊತೆಗೆ ಪ್ರಗತಿಪರರು ಸಹ ಬೆಂಬಲಿಸುತ್ತಿದ್ದಾರೆ. ಅದೇ ರೀತಿ ಕೊಪ್ಪಳ ವೈದ್ಯರ ಸಂಘದಿಂದ ಒಂದು ದಿನ ಬೆಂಬಲ ನೀಡಿ ಹೋರಾಟವನ್ನು ಗಟ್ಟಿಗೊಳಿಸುವ ಜೊತೆಗೆ ತನು-ಮನ-ಧನದ ಸಹಕಾರ ನೀಡಿ ಸದಾ ಹೋರಾಟದ ಭಾಗವಾಗಿದ್ದಾರೆ. ಒಬ್ಬ ವೈದ್ಯೆಯಾಗಿ ನಾನು ಮಧ್ಯಮ ವರ್ಗದ ಜನರ ಸಂಕಷ್ಟ ನೋಡಿದಿದ್ದೇನೆ. ಅವರು ಹತ್ತು ವರ್ಷ ದುಡಿದು ತೆಗೆದಿರಿಸಿದ ಹಣ ಇವತ್ತಿನ ಕಾಯಿಲೆಗಳನ್ನು ತೋರಿಸಿಕೊಳ್ಳಲು ಸಾಲುತ್ತಿಲ್ಲ ಎಂಬ ಅಂಶ ಬಹಳ ಸಂಕಷ್ಟದ್ದು ಎಂದರು.

ಇನ್ನರ್ ವ್ಹೀಲ್ ಕ್ಲಬ್ ಕೊಪ್ಪಳದ ಅಧ್ಯಕ್ಷೆ ಮಧು ಶೆಟ್ಟರ್ ಮಾತನಾಡಿ, ಈಗಾಗಲೇ ತಡವಾಗಿದ್ದು, ನಾವೂ ಸಹ ಹೋರಾಟಕ್ಕೆ ತಡವಾಗಿ ಬಂದು ಭಾಗವಹಿಸಿದ್ದೇವೆ. ಕೊಪ್ಪಳವನ್ನೇ ಯಾಕೆ ಕರ್ಖಾನೆ ತುಂಬಿಸಿ ಹಾಳು ಮಾಡುತ್ತಿದ್ದಾರೆ, ಮಕ್ಕಳನ್ನು ನಾವು ನಮ್ಮ ಜೊತೆಗೆ ಇಟ್ಟುಕೊಂಡು ಓದಿಸಲು ಆಗದಷ್ಟು ಇಲ್ಲಿ ಆರೋಗ್ಯ ಕೆಡುತ್ತಿದೆ. ಸರಕಾರ ಎಚ್ಚರಗೊಂಡು ಇಲ್ಲಿನ ಜನರಿಗೆ ಅವರ ಇಚ್ಛೆಯಂತೆ ಬದುಕಲು ಬಿಡಬೇಕು ಎಂದರು.

ಇನ್ನರ್ ವ್ಹೀಲ್ ಕ್ಲಬ್‌ನ ಸೌಮ್ಯ ನಾಲವಾಡ ಮಾತನಾಡಿ, ಶುಕ್ರವಾರ 50ನೇ ದಿನವಾಗಿದ್ದರಿಂದ ಹೆಚ್ಚಿನ ಜನರು ಸೇರಬೇಕು. ಇಲ್ಲಿನ ಪ್ರಮುಖ ಹೋರಾಟಗಾರರ ನಿಷ್ಕಲ್ಮಷವಾದ ಹೋರಾಟವನ್ನು ಕಂಡು ವಿವಿಧ ಸಂಘಟನೆಗಳು ಬೆಂಬಲಕೊಟ್ಟಿದ್ದಾರೆ.

ಸಚಿವರು ಸಹ ಹೋರಾಟಕ್ಕೆ ಬೆಂಬಲ ನೀಡಿದ್ದು ಬಹಳ ಒಳ್ಳೆಯ ಬೆಳವಣಿಗೆ. ಒಳ್ಳೆಯ ಕೆಲಸ ಮಾಡುವಾಗ ವಿರೋಧಿಸುವ ಜನ ಕೆಲವರು ಇದ್ದೇ ಇರುತ್ತಾರೆ. ಇಡೀ ಕೊಪ್ಪಳ ಭಾಗ್ಯನಗರ ಮತ್ತು ಹಲವಾರು ಹಳ್ಳಿಗಳ ಜನರು ಭಯಪಡದೇ ಒಕ್ಕೊರಲಿನಿಂದ ಹೋರಾಟವನ್ನು ಬೆಂಬಲಿಸಬೇಕು, ನಿಶ್ಚಿತವಾಗಿ ಹೋರಾಟ ಗೆಲ್ಲುತ್ತದೆ ಎಂದರು.

ವೇದಿಕೆಯಲ್ಲಿ ಕಾರ್ಯದರ್ಶಿ ರೇಖಾ ಕಡ್ಲಿ, ಸುವರ್ಣ ಆರ್.ಶೆಟ್ಟರ್, ಹೇಮಾ ಬಳ್ಳಾರಿ, ಸುಧಾ ಶೆಟ್ಟರ್, ಶ್ವೇತಾ ಪಿ.ಅಕ್ಕಿ, ಸಾವಿತ್ರಿ ಮುಜುಮದಾರ, ಶಿಲ್ಪಾ ಶಶಿಮಠ, ಸೌಮ್ಯ ನಾಲವಾಡ, ಪ್ರತಿಮಾ ಪಟ್ಟಣಶೆಟ್ಟಿ, ಕವಿತಾ ಶೆಟ್ಟರ್, ಲತಾ ಉಲ್ಲತ್ತಿ, ಸುಜಾತಾ ಶೆಟ್ಟರ್, ಶೋಭಾ ಹಮ್ಮಿಗಿ, ಶರಣಮ್ಮ ಪಾಟೀಲ್, ಶಶಿಕಲಾ ಕುರುಗೋಡು ಇದ್ದರು.

ನಿವೃತ್ತ ಉಪನ್ಯಾಸಕ ಶಾಂತವೀರ ಎಮ್.ಕಂಬಾಳಿಮಠ, ಶಂಭುಲಿಂಗಪ್ಪ ಹರಗೇರಿ, ಡಿ.ಎಂ. ಬಡಿಗೇರ, ಎಸ್.ಬಿ. ರಾಜೂರು, ಸಿ.ವಿ. ಜಡಿಯವರ, ಜಿ.ಬಿ. ಪಾಟೀಲ್, ರವಿ ಕಾಂತನವರ, ಶಾಂತಯ್ಯ ಅಂಗಡಿ, ಶರಣು ಗಡ್ಡಿ, ಮಹಾದೇವಪ್ಪ ಎಸ್.ಮಾವಿನಮಡು, ಎಚ್.ಬಿ. ಆನಂದಳ್ಳಿ, ಭೋಜಪ್ಪ ಕುಂಬಾರ, ಬಸವರಾಜ ನರೇಗಲ್, ಮಂಗಳೇಶ ರಾಠೋಡ್, ರಂಗನಾಥ ಕೋಳೂರು, ಭೀಮಪ್ಪ ಯಲಬುರ್ಗಾ, ಶಂಭುಲಿಗಪ್ಪ ಹರಗೇರಿ, ಮಖ್ಬೂಲ್ ರಾಯಚೂರು, ಎಸ್.ಬಿ. ರಾಯಚೂರು, ಲಿಂಗರಾಜ ನವಲಿ, ಸುರೇಶಗೌಡ ಹಿರೇಗೌಡರ, ಶಿವಪ್ಪ ಹಡಪದ ಪಾಲ್ಗೊಂಡಿದ್ದರು.




**ಇಂದು 50ನೇ ದಿನದ ಹೋರಾಟ**

ಹೋರಾಟದ 50ನೇ ದಿನವಾದ ಡಿ.19ರ ಬೆಳಿಗ್ಗೆ 11 ಗಂಟೆಗೆ ಬಹಿರಂಗ ಸಭೆ ನಡೆಸಲಾಗುತ್ತಿದೆ. ಸಭೆಯ ಸಾನ್ನಿಧ್ಯವನ್ನು ಅಥಣಿ ನಿಡಸೋಸಿ ಸ್ವಾಮಿಗಳು ವಹಿಸಲಿದ್ದಾರೆ. ಕಪ್ಪತ್ತಗುಡ್ಡ ಸಂರಕ್ಷಣೆ ಮಾಡಿದ ನಂದಿವೇರಿ ಮಠದ ಶ್ರೀ ಶಿವಕುಮಾರ ಸ್ವಾಮಿಗಳು ಆಗಮಿಸುವರು. ವಿಶೇಷ ಅತಿಥಿಯಾಗಿ ಅರಕಲಗೂಡು ಮಾಜಿ ಶಾಸಕರು, 'ಪರಿಸರಕ್ಕಾಗಿ ನಾವು' ಸಂಘಟನೆಯ ಅಧ್ಯಕ್ಷ ಎ.ಟಿ. ರಾಮಸ್ವಾಮಿ ಬಾಧಿತ ಹಳ್ಳಿಗಳಿಗೆ ಭೇಟಿ ನೀಡಿ ಹೋರಾಟಕ್ಕೆ ಬೆಂಬಲ ನೀಡಲಿದ್ದಾರೆ.

## ಮಹಿಳಾ ವಿರೋಧಿ ಬಿಹಾರ ಮುಖ್ಯಮಂತ್ರಿ ನಿತೀಶ ಕುಮಾರ ಮೇಲೆ ಕ್ರಮಕ್ಕೆ ಆಗ್ರಹ



■ವಿಜಯಸಾಕ್ಷಿ ಸುದ್ದಿ, ಗದಗ

ಬಿಹಾರ ಸರ್ಕಾರದಿಂದ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಸಾರ್ವಜನಿಕವಾಗಿ ವೈದ್ಯೆಯ ಮಹಿಳೆಯ ಹಿಜಾಬ್ ಎಳೆದು ಅವಮಾನ ಮಾಡಿರುವ ಘಟನೆಯನ್ನು ಖಂಡಿಸಿ, ಕೂಡಲೇ ಇಂತಹ ಮಹಿಳಾ ವಿರೋಧಿ ಮುಖ್ಯಮಂತ್ರಿ ನಿತೀಶ ಕುಮಾರರನ್ನು ಹುದ್ದೆಯಿಂದ ವಜಾಗೊಳಿಸಬೇಕೆಂದು ಸ್ಲಂ ಜನಾಂದೋಲನ-ಕರ್ನಾಟಕ ಹಾಗೂ ಗದಗ ಜಿಲ್ಲಾ ಸ್ಲಂ ಮಹಿಳಾ ಸಮಿತಿಯಿಂದ ರಾಷ್ಟ್ರಪತಿಗಳಿಗೆ ಮನವಿ ನೀಡಿ ಆಗ್ರಹಿಸಿದರು.

ಮಹಿಳಾ ಸಮಿತಿ ಸಂಚಾಲಕಿ ಪರವೀನಬಾನು ಹವಾಲ್ದಾರ ಮಾತನಾಡಿ, ಬಿಹಾರದ ಪಾಟ್ನಾದಲ್ಲಿ ಸರ್ಕಾರದ ವತಿಯಿಂದ ಆಯುಷ್ ವೈದ್ಯರಿಗೆ ನೇಮಕಾತಿ ಪತ್ರ ವಿತರಿಸುವ ಸಂದರ್ಭದಲ್ಲಿ ಮಹಿಳಾ ವೈದ್ಯೆಯ ಹಿಜಾಬ್ ಎಳೆಯುವ ಮೂಲಕ ಮಹಿಳಾ ಸಮುದಾಯಕ್ಕೆ ಅವಮಾನ ಮಾಡಿರುವ ಬಿಹಾರದ ಮುಖ್ಯಮಂತ್ರಿ ನಿತೀಶ ಕುಮಾರರನ್ನು ಮಹಿಳಾ ದೌರ್ಜನ್ಯ ತಡೆ ಕಾಯ್ದೆಯಡಿ ಬಂಧಿಸಬೇಕು. ಇಂತಹ ಮುಖ್ಯಮಂತ್ರಿಗಳಿಂದ ಮಹಿಳೆಯರ ರಕ್ಷಣೆ ಹೇಗೆ ಸಾಧ್ಯ? ಈ ಘಟನೆಯನ್ನು ಗಂಭೀರವಾಗಿ ಪರಿಗಣಿಸಿ ಸಂವಿಧಾನಬದ್ಧ ಮಹಿಳಾ ದೌರ್ಜನ್ಯ ತಡೆ ಕಾಯ್ದೆಯಡಿಯಲ್ಲಿ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಮಹಿಳಾ ಸಮಿತಿ ಮುಖಂಡರಾದ ಮೆಹರುನಿಸಾ ಡಂಬಳ, ಮೈಮುನ ಬೈರಕದಾರ, ಪ್ರೇಮಾ ಮಣ್ಣವಡರ, ಮೀನಾಕ್ಷಿ ಗೋಂದಾರ, ಸಲ್ಮಾ ಬಿ, ವಿಶಾಲಾಕ್ಷಿ ಗೌಡ್ರ, ಜಿಲ್ಲಾ ಸಮಿತಿ ಅಧ್ಯಕ್ಷರಾದ ಇಮ್ತಿಯಾಜ ಆರ್. ಮಾನ್ವಿ, ಮುಖಂಡರಾದ ಇಬ್ರಾಹಿಂ ಮುಲ್ಲಾ, ಮೆಹಬೂಬಸಾಬ ಬಳ್ಳಾರಿ, ಶರಣಪ್ಪ ಸೂಡಿ, ಸಲೀಂ ಹರಿಹರ, ಮಕ್ತುಮಸಾಬ ಮುಲ್ಲಾನವರ, ಖಾಜಾಸಾಬ ಇಸ್ಮಾಯಿಲನವರ ಮುಂತಾದವರು ಉಪಸ್ಥಿತರಿದ್ದರು.

### ದಿನದರ್ಶಿಕೆ ಬಿಡುಗಡೆ, ಸಾಧಕರಿಗೆ ಸನ್ಮಾನ ಕಾರ್ಯಕ್ರಮದ ಪೂರ್ವಭಾವಿ ಸಭೆ

# ವಿಶ್ವಕರ್ಮ ಸಮಾಜದ ಪ್ರತಿ ಮನೆಗೂ ದಿನದರ್ಶಿಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಪ್ರತಿಯೊಂದು ವಿಶ್ವಕರ್ಮ ಸಮಾಜದ ಮನೆಗಳಿಗೆ 2026ರ ದಿನದರ್ಶಿಕೆಯನ್ನು ಉಚಿತವಾಗಿ ವಿತರಿಸಲಾಗುವುದು. ದಿನದರ್ಶಿಕೆ ಬಿಡುಗಡೆಯೊಂದಿಗೆ ರಾಜ್ಯ ಹಾಗೂ ಜಿಲ್ಲಾ ಮಟ್ಟದಲ್ಲಿ ಸಾಧನೆ ಮಾಡಿದ ವಿಶ್ವಕರ್ಮ ಸಮಾಜದ ಸಾಧಕರನ್ನು ಸನ್ಮಾನಿಸುವ ಮತ್ತು ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರೊಂದಿಗೆ ಸಮುದಾಯದ ಸಮಸ್ಯೆ ಹಾಗೂ ಸಲಹೆಗಳ ಕುರಿತು ಸಂವಾದ ಏರ್ಪಡಿಸಲಾಗಿದೆ. ಸಮಾಜ ಬಾಂಧವರು ಕಾರ್ಯಕ್ರಮದಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಬೇಕು ಎಂದು ಗದಗ ಜಿಲ್ಲಾ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ರಾಜಗೋಪಾಲ ಡಿ.ಕಡ್ಲಿಕೊಪ್ಪ ಹೇಳಿದರು.

ಅವರು ನಗರದ ವಿಶ್ವಕರ್ಮ ಸಮುದಾಯ ಭವನದಲ್ಲಿ ಗದಗ ಜಿಲ್ಲಾ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘ ಹಾಗೂ ಅಂಗ ಸಂಸ್ಥೆಗಳು ಮತ್ತು ಗದಗ ಜಿಲ್ಲೆಯ ಸಮಸ್ತ ವಿಶ್ವಕರ್ಮ ಸಮುದಾಯದ ವತಿಯಿಂದ ಡಿ.21ರ ಬೆಳಿಗ್ಗೆ 10.30 ಗಂಟೆಗೆ ನಗರದ ವಿಜಯನಗರ ಬಡಾವಣೆಯ ವಿಶ್ವಕರ್ಮ ಸಮುದಾಯ ಭವನದಲ್ಲಿ ಹಮ್ಮಿಕೊಂಡಿರುವ 2026ರ ದಿನದರ್ಶಿಕೆ ಬಡುಗಡೆ ಹಾಗೂ ಸನ್ಮಾನ ಸಮಾರಂಭ ಮತ್ತು ಸಂವಾದ ಕಾರ್ಯಕ್ರಮದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸಮಾರಂಭದ ಸಾನ್ನಿಧ್ಯವನ್ನು ನರಗುಂದ ತಾಲೂಕಿನ ಚಿಕ್ಕುಂಬಿ ನಾಗಲಿಂಗೇಶ್ವರ ಮಠದ ಶ್ರೀ ಅಭಿನವ ನಾಗಲಿಂಗ ಸ್ವಾಮೀಜಿ ವಹಿಸುವರು. ವಿಧಾನ ಪರಿಷತ್ ಸದಸ್ಯ ಪ್ರೊ. ಎಸ್.ವಿ. ಸಂಕನೂರ ಉದ್ಘಾಟಿಸುವರು. ಜಿಲ್ಲಾ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ರಾಜಗೋಪಾಲ ಡಿ.ಕಡ್ಲಿಕೊಪ್ಪ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಸುಜ್ಞಾನಮೂರ್ತಿ ಪಿ, ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ಬಾಬು ಪತ್ತಾರ, ರಾಜ್ಯ ವಿಶ್ವಕರ್ಮ ಸಮಾಜದ ಅಧ್ಯಕ್ಷ ಈಶ್ವರಾಚಾರ್ಯ ಎಂ.ಪಿ., ಕರ್ನಾಟಕ ಟ್ಯಾಕ್ಸ್ ಪ್ರ್ಯಾಕ್ಟಿಶನರ್ ಅಸೋಸಿಯೇಶನ್ ಬೆಂಗಳೂರ ಅಧ್ಯಕ್ಷ ಎಸ್. ನಂಜುಂಡ ಪ್ರಸಾದ, ಶ್ರೀಕ್ಷೇತ್ರ ವರವಿ ಮೌನೇಶ್ವರ ದೇವಸ್ಥಾನ ಹಾಗೂ ಮಠದ ಟ್ರಸ್ಟ್ ಕಮಿಟಿ ಅಧ್ಯಕ್ಷ ಮೋಹನ ನರಗುಂದ ಆಗಮಿಸುವರು ಎಂದರು.

ಬೆಳಿಗ್ಗೆ 9.30ಕ್ಕೆ ಕೊಪ್ಪಳದ ಎಸ್.ಎನ್.ಎಸ್. ಬಡಿಗೇರ ಹಾಗೂ ಸಂಗಡಿಗರಿಂದ ಸಂಗೀತ ಕಾರ್ಯಕ್ರಮ ಏರ್ಪಡಿಸಲಾಗಿದೆ. ಸಮಾಜದ ಸರ್ವರೂ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಬೇಕು ಎಂದು ವಿನಂತಿಸಿದರು.

ಸಭೆಯಲ್ಲಿ ವಿಶ್ವಕರ್ಮ ವಿದ್ಯಾ ಸಂಸ್ಥೆಯ ಅಧ್ಯಕ್ಷರಾದ ಕೆ.ಎಸ್. ಬಡಿಗೇರ, ಗದಗ ಶ್ರೀಕಾಳಿಕಾದೇವಿ ದೇವಸ್ಥಾನ ಟ್ರಸ್ಟ್ ಅಧ್ಯಕ್ಷರಾದ ಉಮೇಶ ಕೆ.ಅರ್ಕಸಾಲಿ, ಬೆಟಗೇರಿ ಶ್ರೀಕಾಳಿಕಾದೇವಿ ದೇವಸ್ಥಾನ ಟ್ರಸ್ಟ್ ಅಧ್ಯಕ್ಷರಾದ ಶ್ರೀಧರ ಕೊಣ್ಣೂರ, ಜಿಲ್ಲಾ ವಿಶ್ವಕರ್ಮ ಸಾಹಿತ್ಯ ಸಾಂಸ್ಕೃತಿಕ ಸಂಘದ ಅಧ್ಯಕ್ಷರಾದ ಮೌನೇಶ ಸಿ.ಬಡಿಗೇರ(ನರೇಗಲ್ಲ), ಶಂಕರಾಚಾರ್ಯ ಕಂಚಗಾರ ಇದ್ದರು.

ಸಂಘದ ಪದಾಧಿಕಾರಿಗಳು, ಸದಸ್ಯರು ಹಾಗೂ ಸಮಾಜ ಬಾಂಧವರು ಪಾಲ್ಗೊಂಡಿದ್ದರು. ವ್ಯವಸ್ಥಾಪಕ ಮಧುಸೂದನ ವಿಶ್ವಕರ್ಮ ಸ್ವಾಗತಿಸಿ, ನಿರೂಪಿಸಿ, ವಂದಿಸಿದರು.



ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಚಂದ್ರಶೇಖರ ವಾಯ್.ಶಿಲ್ಪಿ ಕಲಬುರ್ಗಿ ಹಾಗೂ ಬಾಗಲಕೋಟೆಯ ನಾಗಲಿಂಗಪ್ಪ ಗಂಗೂರ, ಯಾದಗಿರಿಯ ಬಸಣ್ಣ ಮೋ.ಬಡಿಗೇರ, ಕೊಪ್ಪಳದ ದೇವೇಂದ್ರಕುಮಾರ ಪತ್ತಾರ ಮತ್ತು ಗದಗ ಶ್ರೀಕಾಳಿಕಾದೇವಿ ದೇವಸ್ಥಾನ ಟ್ರಸ್ಟ್ ಅಧ್ಯಕ್ಷರಾದ ಉಮೇಶ ಕೆ.ಅರ್ಕಸಾಲಿ, ಪತ್ರಕರ್ತ ಮೌನೇಶ ಸಿ.ಬಡಿಗೇರ(ನರೇಗಲ್ಲ), ವರದಿಗಾರರಾದ ಗಿರೀಶ ಕಮ್ಮಾರ ಮತ್ತು ಮಂಜುನಾಥ ಪತ್ತಾರ ಇವರನ್ನು ಸನ್ಮಾನಿಸಲಾಗುವುದು ಎಂದು ರಾಜಗೋಪಾಲ ಡಿ.ಕಡ್ಲಿಕೊಪ್ಪ ತಿಳಿಸಿದರು.

## ಇ-ಖಾತಾ ಮೂಲಕ ಆಸ್ತಿ ದಾಖಲೆ ಸುರಕ್ಷಿತ

▶▶ಮೊದಲನೇ ಪುಟದಿಂದ

ಬೆಳಗಾವಿ ಉತ್ತರ ವಿಧಾನಸಭಾ ಕ್ಷೇತ್ರದ ಶಾಸಕರಾದ ಆಸಿಫ್ ಸೇಠ್ ಮಾತನಾಡಿದರು. ಸಮಾರಂಭದಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಕರ್ಯ ಅಭಿವೃದ್ಧಿ ಸಚಿವರಾದ ಡಾ. ಎಂ.ಬಿ. ಪಾಟೀಲ, ಉನ್ನತ ಶಿಕ್ಷಣ ಸಚಿವರಾದ ಡಾ. ಎಂ.ಸಿ. ಸುಧಾಕರ, ಮುಖ್ಯಮಂತ್ರಿಗಳ ಕಾನೂನು ಸಲಹೆಗಾರರು ಹಾಗೂ ಶಾಸಕರಾದ ಪೊನ್ನಣ್ಣ, ಕೂಡ್ಲಿಗಿ ಶಾಸಕ ಶ್ರೀನಿವಾಸ, ವಿಧಾನಪರಿಷತ್ ಸದಸ್ಯರಾದ ಸಲೀಂ ಅಹ್ಮದ್, ನಸೀರ್ ಅಹ್ಮದ್, ಬೆಳಗಾವಿ ಮಹಾನಗರ ಪಾಲಿಕೆಯ ಮಹಾಪೌರರಾದ ಮಂಗೇಶ ಪವಾರ, ಉಪ ಮಹಾಪೌರರಾದ ವಾಣಿ ಜೋಶಿ, ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್, ನಗರಾಭಿವೃದ್ಧಿ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ತುಷಾರ ಗಿರಿನಾಥ, ಸರ್ಕಾರದ ಕಾರ್ಯದರ್ಶಿಗಳಾದ ದೀಪಾ ಚೋಳನ್ ಸೇರಿದಂತೆ ಪ್ರಭುಲಿಂಗ ಕವಳಿಕಟ್ಟಿ, ಡಾ. ಸೆಲ್ವಮಣಿ ಆರ್ ಹಾಗೂ ಬೆಳಗಾವಿ ಮಹಾನಗರ ಪಾಲಿಕೆಯ ಸದಸ್ಯರು ಉಪಸ್ಥಿತರಿದ್ದರು.

## ರೈತರು ಮೆಕ್ಕೆಜೋಳ ಬೆಳೆದಿದ್ದೇ ತಪ್ಪಾಯ್ತೇ?

▶▶ಮೊದಲನೇ ಪುಟದಿಂದ



ದರ (1600-1700)ದಲ್ಲಿ ಇನ್ನೂ 1 ವರ್ಷಕ್ಕಾಗುವಷ್ಟು ಮೆಕ್ಕೆಜೋಳವನ್ನು ದಾಸ್ತಾನು ಮಾಡಿಟ್ಟುಕೊಂಡಿರುವ ಕಂಪನಿಗಳಿಗೆ 2400 ರೂ ಕೊಟ್ಟು ಖರೀದಿಸುವ ಅವಶ್ಯಕತೆಯಿಲ್ಲ. ಯಾವ ಕಂಪನಿಗಳು ಎಷ್ಟು ಪ್ರಮಾಣದಲ್ಲಿ ಖರೀದಿಸಬೇಕು ಎಂಬ ಆದೇಶ ಮಾಡುವ ಪರಮಾಧಿಕಾರ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳಕ್ಕಿಲ್ಲ. ಸಾಫ್ಟ್‌ವೇರ್‌ಗಳಲ್ಲಿ ಸಾಕಷ್ಟು ನ್ಯೂನತೆಗಳಿವೆ. ಅಸ್ಪಷ್ಟ ಆದೇಶದಿಂದ ಎಲ್ಲರೂ ಸಮಸ್ಯೆ ಅನುಭವಿಸುವಂತಾಗಿದೆ. ಸರ್ಕಾರ ಕೂಡಲೇ ಸಂಬಂಧಪಟ್ಟ ಎಲ್ಲ ಇಲಾಖೆ, ಕಂಪನಿಗಳ ಸಭೆ ಮಾಡಿ ಸಮಸ್ಯೆ ಪರಿಹರಿಸಬೇಕು ಎಂದು ಟಿಎಪಿಸಿಎಂಸ್‌ನ ಅಧ್ಯಕ್ಷ ಸೋಮೇಶ ಉಪನಾಳ ಆಗ್ರಹಿಸಿದ್ದಾರೆ.

## ವಾಣಿಜ್ಯೋದ್ಯಮ ಸಂಸ್ಥೆಯ ಮಹಿಳಾ ಘಟಕದ ಪದಾಧಿಕಾರಿಗಳ ಆಯ್ಕೆ




■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಮಹಿಳಾ ಘಟಕದ ಅಧಿಕಾರ ಪದಗ್ರಹಣ ಸಮಾರಂಭವು ಸಂಸ್ಥೆಯ ಶ್ರೀ ಬನಪ್ಪ ಸಂಕಪ್ಪ ಸಂಕಣ್ಣವರ ಸಭಾ ಭವನದಲ್ಲಿ ಜರುಗಿತು. ಸಭೆಯ ಅಧ್ಯಕ್ಷತೆಯನ್ನು ಮಹಿಳಾ ಘಟಕದ ಅಧ್ಯಕ್ಷರಾದ ನಂದಾ ಚಂದ್ರು ಬಾಳಿಹಳ್ಳಿಮಠ ವಹಿಸಿದ್ದರು.

ಒಂದು ವರ್ಷದಲ್ಲಿ ಕೈಗೊಂಡ ಕಾರ್ಯಕಲಾಪಗಳ ವರದಿಯನ್ನು ಮಹಿಳಾ ಘಟಕದ ಗೌರವ ಕಾರ್ಯದರ್ಶಿಗಳಾದ ಜ್ಯೋತಿ ರಾಮನಗೌಡ ದಾನಪ್ಪಗೌಡ್ರ ಮಂಡಿಸಿ ಒಪ್ಪಿಗೆ ಪಡೆದು. ನಂತರ ಲೆಕ್ಕ ಪತ್ರದ ವರದಿಯನ್ನು ಮಹಿಳಾ ಘಟಕ ಕೋಶಾಧ್ಯಕ್ಷರಾದ ಪೂರ್ಣಿಮಾ ಕೆ.ಆಟದ ಮಂಡಿಸಿ ಒಪ್ಪಿಗೆ ಪಡೆದರು.

2025-2026ನೇ ಸಾಲಿಗೆ ಮಹಿಳಾ ಘಟಕದ ನೂತನ ಅಧ್ಯಕ್ಷರಾಗಿ ಜ್ಯೋತಿ ರಾಮನಗೌಡ ದಾನಪ್ಪಗೌಡ್ರ ಅಧಿಕಾರ ವಹಿಸಿಕೊಂಡರು. ಪ್ರಥಮ ಉಪಾಧ್ಯಕ್ಷರಾಗಿ ಸುಜಾತಾ ಶರಣಬಸಪ್ಪ ಗುಡಿಮನಿ, ದ್ವಿತೀಯ ಉಪಾಧ್ಯಕ್ಷರಾಗಿ ನಾಗರತ್ನಾ ಎಸ್.ಮುಳಗುಂದ, ತೃತೀಯ ಉಪಾಧ್ಯಕ್ಷರಾಗಿ ಪಾರ್ವತಿ ಪಶುಪತಯ್ಯ ಶಾಬಾದಿಮಠ, ಗೌರವ ಕಾರ್ಯದರ್ಶಿಗಳಾಗಿ ಪೂರ್ಣಿಮಾ ಕೆ.ಆಟದ, ಸಹ ಗೌರವ ಕಾರ್ಯದರ್ಶಿಗಳಾಗಿ ಸುಧಾ ಚನ್ನವೀರಪ್ಪ ಹುಣಸಿಕಟ್ಟಿ, ಶಿಲ್ಪಾ ತೋಂಟೇಶ ವೀರಲಿಂಗಯ್ಯನಮಠ, ಕೋಶಾಧ್ಯಕ್ಷರಾಗಿ ರೇಣುಕಾ ಲಿಂಗರಾಜ ಅಮಾತ್ಯ ಅಧಿಕಾರ ಸ್ವೀಕರಿಸಿದರು.

ಮುಖ್ಯ ಅತಿಥಿಗಳಾಗಿ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷರಾದ ಶರಣಬಸಪ್ಪ ಸಂಗಪ್ಪ ಗುಡಿಮನಿ ಪಾಲ್ಗೊಂಡು ಮಾತನಾಡಿದರು. ಶರಣಬಸಪ್ಪ ಸಂಗಪ್ಪ ಗುಡಿಮನಿ ಹಾಗೂ ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಮಹಾ ಸಂಸ್ಥೆಯಿಂದ ಅಂತಾರಾಷ್ಟ್ರೀಯ ಮಹಿಳಾ ಉದ್ದಿಮೆದಾರರ ಸಮ್ಮೇಳನದಲ್ಲಿ ಪ್ರಶಸ್ತಿ ಪುರಸ್ಕೃತರಾದ ಪಾರ್ವತಿ ಪಶುಪತಯ್ಯ ಶಾಬಾದಿಮಠರನ್ನು ಸನ್ಮಾನಿಸಿ ಗೌರವಿಸಲಾಯಿತು.

ಮಹಿಳಾ ಘಟಕದ ಮಾಜಿ ಅಧ್ಯಕ್ಷರಾದ ಸುವರ್ಣ ಸದಾಶಿವಯ್ಯ ಮದರಿಮಠ ನಿರೂಪಿಸಿದರು. ಕೊನೆಯಲ್ಲಿ ಮಹಿಳಾ ಘಟಕದ ಮಾಜಿ ಅಧ್ಯಕ್ಷರಾದ ಜಯಶ್ರೀ ತಾತನಗೌಡ ಪಾಟೀಲ ವಂದಿಸಿದರು.

## ಅಖಿಲ ಕರ್ನಾಟಕ ಮುಸ್ಲಿಂ ಮಹಾಸಭಾದ ಗದಗ ಶಹರ ಪದಾಧಿಕಾರಿಗಳ ನೇಮಕ







■ವಿಜಯಸಾಕ್ಷಿ ಸುದ್ದಿ, ಗದಗ

ಅಖಿಲ ಕರ್ನಾಟಕ ಮುಸ್ಲಿಂ ಮಹಾಸಭಾದ ಜಿಲ್ಲಾ ಕಚೇರಿಯಲ್ಲಿ ಸಭೆಯನ್ನು ಕರೆಯಲಾಗಿತ್ತು. ಸಭೆಯ ಅಧ್ಯಕ್ಷತೆಯನ್ನು ಜಿಲ್ಲಾಧ್ಯಕ್ಷ ಎಂ.ಡಿ. ಜಾಫರ್ ಡಾಲಾಯತ್ ವಹಿಸಿದ್ದರು. ಮುಖ್ಯ ಅತಿಥಿಯಾಗಿ ರಾಜ್ಯಾಧ್ಯಕ್ಷ ಮಹ್ಮದಶಫಿ ನಾಗರಕಟ್ಟಿ ಆಗಮಿಸಿದ್ದರು.

ಸಭೆಯಲ್ಲಿ ಗದಗ ಶಹರ ಪದಾಧಿಕಾರಿಗಳ ನೇಮಕದ ಬಗ್ಗೆ ಚರ್ಚಿಸಲಾಯಿತು. ಗದಗ ಶಹರ ಘಟಕದ ಅಧ್ಯಕ್ಷರನ್ನಾಗಿ ಹಾಜಿ ತಾಜುದ್ದೀನ್ ಪಾಪಣ್ಣವರ, ಉಪಾಧ್ಯಕ್ಷರನ್ನಾಗಿ ಖುತ್ಬುದ್ದೀನ ಶೇಖ, ಗದಗ ಶಹರ ಪ್ರಧಾನ ಕಾರ್ಯದರ್ಶಿಗಳನ್ನಾಗಿ ರಿಯಾಜ್ ಅಹ್ಮದ ದೊಡ್ಡಮನಿ, ಸಹ ಕಾರ್ಯದರ್ಶಿಗಳನ್ನಾಗಿ ಮೀರಾಸಾಬ ಇರಕಲ್ ಮತ್ತು ಶಹರ ಸಂಘಟನಾ ಕಾರ್ಯದರ್ಶಿಗಳನ್ನಾಗಿ ನಾಸೀರ ನರೇಗಲ್ ಅವರನ್ನು ಒಮ್ಮತದಿಂದ ಆಯ್ಕೆ ಮಾಡಲಾಯಿತು.

ರಾಜ್ಯಾಧ್ಯಕ್ಷರಾದ ಮಹ್ಮದಶಫಿ ನಾಗರಕಟ್ಟಿಯವರ ಆದೇಶದ ಮೇರೆಗೆ ಗದಗ ಜಿಲ್ಲಾ ಅಧ್ಯಕ್ಷರಾದ ಎಂ.ಡಿ. ಜಾಫರ್ ಡಾಲಾಯತ ಪದಾಧಿಕಾರಿಗಳನ್ನು ನೇಮಕ ಮಾಡಿ ಆದೇಶ ಹೊರಡಿಸಿದ್ದರು. ನೇಮಕವಾದ ಎಲ್ಲರೂ ಆದೇಶ ಪಡೆದ ದಿನದಿಂದ ಕಾರ್ಯ ಪ್ರವೃತ್ತರಾಗಬೇಕು, ಗದಗ ಶಹರದಲ್ಲಿರುವ ಮುಸ್ಲಿಂ ಸಮುದಾಯನ್ನು ಸಂಘಟಿಸಿ, ಅವರನ್ನು ಶೈಕ್ಷಣಿಕ, ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯವಾಗಿ ಸಮಾಜದ ಮುಖ್ಯವಾಹಿನಿಗೆ ತರುವಲ್ಲಿ ಶ್ರಮ ವಹಿಸಬೇಕೆಂದು ವಿನಂತಿ ಮಾಡಲಾಗಿದೆ.

# ವಿಕಸಿತ ಭಾರತ ಗುರಿಗೆ ಉಕ್ಕು ಉದ್ಯಮವೇ ಆಧಾರ: ಹೆಚ್.ಡಿ. ಕುಮಾರಸ್ವಾಮಿ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಭಾರತವು ಪ್ರಧಾನಿ ನರೇಂದ್ರ ಮೋದಿ ಅವರ ಆತ್ಮನಿರ್ಭರ ಭಾರತ ಸಂಕಲ್ಪದ ಅಡಿಯಲ್ಲಿ 2030ರ ವೇಳೆಗೆ ವಾರ್ಷಿಕ 300 ಮಿಲಿಯನ್ ಟನ್ ಹಾಗೂ 2047ರ ವೇಳೆಗೆ 500 ಮಿಲಿಯನ್ ಟನ್ ಉಕ್ಕು ಉತ್ಪಾದನೆ ಮಾಡುವ ಮಹತ್ವಾಕಾಂಕ್ಷಿ ಗುರಿಯನ್ನು ಹೊಂದಿದೆ ಎಂದು ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕೆ ಸಚಿವ ಹೆಚ್.ಡಿ. ಕುಮಾರಸ್ವಾಮಿ ಹೇಳಿದರು.



ನವದೆಹಲಿಯಲ್ಲಿ ಪಾಲುದಾರ ರಾಷ್ಟ್ರಗಳ ರಾಯಭಾರಿಗಳು ಹಾಗೂ ರಾಜತಾಂತ್ರಿಕ ಪ್ರತಿನಿಧಿಗಳೊಂದಿಗೆ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಜಾಗತಿಕ ಉಕ್ಕು ಮೌಲ್ಯ ಸರಪಳಿಯೊಂದಿಗೆ ಭಾರತವನ್ನು ಇನ್ನಷ್ಟು ಬಲವಾಗಿ ಸಂಪರ್ಕಿಸುವ ಉದ್ದೇಶವಿದೆ ಎಂದು ತಿಳಿಸಿದರು. ಈ ನಿಟ್ಟಿನಲ್ಲಿ ಎಪ್ರಿಲ್ 2026ರಲ್ಲಿ ನವದೆಹಲಿಯ ಭಾರತ್ ಮಂಟಪದಲ್ಲಿ ನಡೆಯಲಿರುವ 'ಭಾರತ್ ಸ್ಟೀಲ್ 2026' ಅಂತರರಾಷ್ಟ್ರೀಯ ಸಮ್ಮೇಳನ ಮತ್ತು ಪ್ರದರ್ಶನವು ಪ್ರಮುಖ ಪಾತ್ರ ವಹಿಸಲಿದೆ ಎಂದರು.

ಭಾರತ್ ಸ್ಟೀಲ್ 2026 ಅನ್ನು ನೀತಿ ನಿರೂಪಕರು, ಉದ್ಯಮ ನಾಯಕರು, ಹೂಡಿಕೆದಾರರು, ತಂತ್ರಜ್ಞಾನ ಪೂರೈಕೆದಾರರು ಮತ್ತು ಖರೀದಿದಾರರನ್ನು ಒಟ್ಟುಗೂಡಿಸುವ ಜಾಗತಿಕ ವೇದಿಕೆಯಾಗಿಸಲಾಗುತ್ತದೆ. ಉಕ್ಕು ಬಳಕೆಯ ವಿಸ್ತರಣೆ, ಸುಸ್ಥಿರತೆ, ಕಚ್ಚಾವಸ್ತು ಪೂರೈಕೆ ಭದ್ರತೆ, ತಾಂತ್ರಿಕ ನಾವೀನ್ಯತೆ ಮತ್ತು ಹೂಡಿಕೆ ಉತ್ತೇಜನಕ್ಕೆ ಈ ಕಾರ್ಯಕ್ರಮ ಕೇಂದ್ರೀಕರಿಸಲಿದೆ ಎಂದು ಸಚಿವರು ವಿವರಿಸಿದರು.

ಭಾರತ ಪ್ರಸ್ತುತ ಜಗತ್ತಿನ ಎರಡನೇ ಅತಿದೊಡ್ಡ ಉಕ್ಕು ಉತ್ಪಾದಕ ರಾಷ್ಟ್ರವಾಗಿದ್ದು, ಉಕ್ಕು ವಲಯವು ದೇಶದ ಜಿ ಡಿಸಿ ಸುಮಾರು 2.5 ಶೇಕಡಾ ಕೊಡುಗೆ ನೀಡುತ್ತಿದ್ದು, 2.8 ಮಿಲಿಯನ್ ಜನರಿಗೆ ಉದ್ಯೋಗ ಒದಗಿಸುತ್ತಿದೆ ಎಂದು ಅವರು ಹೇಳಿದರು.

**ಜಿಲ್ಲಾ ಮಟ್ಟದ ಸರ್ಕಾರಿ ನೌಕರರ ಕ್ರೀಡಾಕೂಟ, ಸಾಂಸ್ಕೃತಿಕ ಸ್ಪರ್ಧೆಯ ಪೂರ್ವಸಿದ್ಧತಾ ಸಭೆ**

# ಸ್ಪರ್ಧಾ ಕಾರ್ಯಕ್ರಮವನ್ನು ವ್ಯವಸ್ಥಿತವಾಗಿ ಜರುಗಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾಮಟ್ಟದ ಸರ್ಕಾರಿ ನೌಕರರ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳನ್ನು ಜನವರಿ 3 ಮತ್ತು 4ರಂದು ಹಮ್ಮಿಕೊಳ್ಳಲಾಗುತ್ತಿದ್ದು, ಸ್ಪರ್ಧೆಗಳನ್ನು ಅಚ್ಚುಕಟ್ಟಾಗಿ ಹಾಗೂ ಸಂಭ್ರಮದಿಂದ ಜರುಗಿಸಲು ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ 2025–26ನೇ ಸಾಲಿನ ಗದಗ ಜಿಲ್ಲಾ ಮಟ್ಟದ ಸರ್ಕಾರಿ ನೌಕರರ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳ ಆಯೋಜನೆ ಕುರಿತು ಜರುಗಿದ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ 2026ರ ಜ. 3ರಂದು ಬೆಳಿಗ್ಗೆ 10.30 ಗಂಟೆಗೆ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳ ಉದ್ಘಾಟನೆ ಜರುಗಲಿದೆ. ಕ್ರೀಡೆ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳು ಮಾನಸಿಕ ಹಾಗೂ ದೈಹಿಕ ಸದೃಢತೆಗಾಗಿ ಪ್ರತಿಯೊಬ್ಬರಿಗೆ ಅತ್ಯವಶ್ಯಕವಾಗಿದ್ದು, ಸರ್ಕಾರಿ ನೌಕರರು ಸ್ಫೂರ್ತಿಯಿಂದ ಸ್ಪರ್ಧೆಗಳಲ್ಲಿ ಭಾಗವಹಿಸುವಂತಾಗಬೇಕು. ಸೋಲು ಅಥವಾ ಗೆಲುವನ್ನು ಗಣನೆಗೆ ತೆಗೆದುಕೊಳ್ಳದೇ ಹೆಚ್ಚಿನ ಸಂಖ್ಯೆಯಲ್ಲಿ ಸರ್ಕಾರಿ ನೌಕರರು ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸ್ಪರ್ಧೆಯಲ್ಲಿ ಪಾಲ್ಗೊಂಡು ಕ್ರೀಡಾ ಮನೋಭಾವನೆ ಮೆರೆಯುವಂತಾಗಬೇಕು ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ಮಾತನಾಡಿ, ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳ ಸುವ್ಯವಸ್ಥಿತ ಆಯೋಜನೆಗೆ ಪೊಲೀಸ್ ಇಲಾಖೆಯ ಸಹಕಾರ ಸದಾ ಇರುತ್ತದೆ. ಹೆಚ್ಚಿನ ಸಂಖ್ಯೆಯಲ್ಲಿ ಸರ್ಕಾರಿ ನೌಕರರು ತಮ್ಮ ಕುಟುಂಬದ ಸಮೇತ ಬಂದು ಸಾಂಸ್ಕೃತಿಕ ಕಾರ್ಯಕ್ರಮ ವೀಕ್ಷಣೆ ಮಾಡಿ ಆನಂದಿಸಬೇಕೆಂದರು.

ಜಿಲ್ಲಾ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಡಾ. ಬಸವರಾಜ ಬಳ್ಳಾರಿ ಮಾತನಾಡಿ, ಕ್ರೀಡಾಕೂಟವು ಯಶಸ್ವಿಯಾಗಿ ನಡೆಯಲು ಎಲ್ಲ ನೌಕರರು ಆಸಕ್ತಿಯಿಂದ ಪಾಲ್ಗೊಳ್ಳಬೇಕು. ಎಲ್ಲರ ಪಾಲ್ಗೊಳ್ಳುವಿಕೆ ಮೂಲಕವೇ ಕ್ರೀಡಾಕೂಟಗಳು ಯಶಸ್ವಿಯಾಗಲು ಸಾಧ್ಯ. ಮನರಂಜನಾ ಕಾರ್ಯಕ್ರಮಗಳಲ್ಲಿ ಸಹ ನೌಕರರು ತಮ್ಮ ಕುಟುಂಬ ಪರಿವಾರದೊಂದಿಗೆ ಆಗಮಿಸಿ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಸ್ವಾದಿಸಬೇಕೆಂದರು.

ಕ್ರೀಡಾಪಟುಗಳು ವಿವಿಧ ತಾಲೂಕುಗಳಿಂದ ಆಗಮಿಸುವುದರಿಂದ ಅವರಿಗೆ ಕೆ.ಎಸ್.ಆರ್.ಟಿ.ಸಿ ಬಸ್ ವ್ಯವಸ್ಥೆ ಕೈಗೊಳ್ಳಬೇಕು. ಸ್ಪರ್ಧಾರ್ಥಿಗಳಿಗೆ ಎರಡು ದಿವಸಗಳ ಕಾಲ ಊಟ ಮತ್ತು ಉಪಹಾರದ ವ್ಯವಸ್ಥೆ, ಕುಡಿಯುವ ನೀರಿನ ವ್ಯವಸ್ಥೆ ಇರುವಂತೆ ನೋಡಿಕೊಳ್ಳಬೇಕು. ಈ ನಿಟ್ಟಿನಲ್ಲಿ ಇಲಾಖೆ ಅಧಿಕಾರಿಗಳು ಸರ್ಕಾರಿ ನೌಕರರ ಸಂಘದ ಸಹಭಾಗಿತ್ವದೊಂದಿಗೆ ಹೆಚ್ಚಿನ ಆಸಕ್ತಿ ವಹಿಸಿ ಸ್ಪರ್ಧೆಗಳನ್ನು ಯಶಸ್ವಿಗೊಳಿಸುವಂತೆ ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಯುವಜನ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಶರಣು ಗೋಗೇರಿ ಮಾತನಾಡಿ, ಕ್ರೀಡಾಕೂಟ ಯಶಸ್ವಿಯಾಗುವಲ್ಲಿ ತಾಲೂಕಾ ನೌಕರರ ಸಂಘದ ಅಧ್ಯಕ್ಷರ ಪಾಲ್ಗೊಳ್ಳುವಿಕೆ ಕಾರಣವಾಗುತ್ತದೆ. ಜೊತೆಗೆ ತಾಲೂಕಿನಿಂದ ಆಗಮಿಸುವ ನೌಕರರಿಗೆ ಕಾರ್ಯಕ್ರಮದ ನಂತರ ತೆರಳಲು ಬಸ್ ವ್ಯವಸ್ಥೆ ಕಲ್ಪಿಸಲಾಗುವುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಹೆಚ್ಚುವರಿ ಪೊಲೀಸ್ ಅಧೀಕ್ಷಕ ಮಹಾಂತೇಶ ಸಜ್ಜನರ್, ಅಧಿಕಾರಿಗಳಾದ ಕೊಟ್ರೇಶ್ ವಿಭೂತಿ, ಶ್ರೈಶೈಲ ಸೋಮನಕಟ್ಟಿ, ಡಾ. ಎಚ್.ಬಿ. ಹುಲಗಣ್ಣವರ, ಸರ್ಕಾರಿ ನೌಕರರ ಸಂಘದ ಉಪಾಧ್ಯಕ್ಷರು, ತಾಲೂಕಾಧ್ಯಕ್ಷರು, ಪದಾಧಿಕಾರಿಗಳಾದ ರಾಜು ಸೋಪಡ್ಲ, ವಸಂತ ಮಡ್ಲೂರ, ರಾಜು ಕಂಠಿಗೊಣ್ಣವರ, ಶ್ರೀಧರ ಚಿನಗುಡಿ, ಮುತ್ತು ಮಾಳಶೆಟ್ಟಿ, ಡಿ.ಎಸ್. ತಳವಾರ, ಮಹಾಂತೇಶ ನಿಟ್ಟಾಲಿ, ಸಿದ್ದಪ್ಪ ಲಿಂಗಧಾಳ, ತಿಪ್ಪಣ್ಣ, ಬಾದನಟ್ಟಿ, ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

# ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿಯಲ್ಲಿ ಸಾಧನೆ



■ ವಿಜಯಸಾಕ್ಷಿ ಸುದ್ದಿ, ಗದಗ

ಸ್ಥಳೀಯ ಜೆಯು ಮತ್ತು ಹಿದಾಯತ್ ಆಂಗ್ಲ ಮಾಧ್ಯಮ ಶಾಲೆಯ ವಿದ್ಯಾರ್ಥಿಗಳು 2025–26ನೇ ಸಾಲಿನ ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿ ಸ್ಪರ್ಧೆಯಲ್ಲಿ ಭಾಗವಹಿಸಿ ಉತ್ತಮ ಸಾಧನೆಗೈದಿದ್ದಾರೆ.

ಕನ್ನಡ ಕಂಠಪಾಠದಲ್ಲಿ ಓವೈಸ್ ಪಾಪಣ್ಣವರ ಪ್ರಥಮ, ದೇಶ ಭಕ್ತಿ ಗೀತೆಯಲ್ಲಿ ಮೊಹಮ್ಮದ್ ಅರ್ಮಾನ್ ಕಿತ್ತೂರ ಪ್ರಥಮ, ಕ್ಲೇ ಮಾಡೆಲಿಂಗ್ ಇಕ್ರಾ ಬಬರ್ಚಿ ಪ್ರಥಮ, ಕವಾಲಿಯಲ್ಲಿ ಅರ್ಶಿಯಾ ಗ್ರೂಪ್ ಪ್ರಥಮ, ಧಾರ್ಮಿಕ ಪಠಣ ಸೂಫಿಯಾನ್ ವೇಲುರ್ ಪ್ರಥಮ, ಚಿತ್ರಕಲೆಯಲ್ಲಿ ಶಿಜಾ ನಮಾ ಪ್ರಥಮ, ಧಾರ್ಮಿಕ ಪಠಣದಲ್ಲಿ ಸಿಯಾನಾ ರಾಣೇಬೆನ್ನೂರ್ ಪ್ರಥಮ, ಇಂಗ್ಲೀಷ್ ಕಂಠಪಾಠದಲ್ಲಿ ಉಮ್ಮೆ ಐಮನ್ ಹುಬ್ಬಳ್ಳಿ ಪ್ರಥಮ, ಮಿಮಿಕ್ರಿಯಲ್ಲಿ ಬೀಬಿ ಹಾಜರಾ ಕಲ್ಯಾಣಿ ದ್ವಿತೀಯ ಸ್ಥಾನ, ಛದ್ಮವೇಷದಲ್ಲಿ ಇಕ್ರಾ ಬೆಳಗಾಂ ದ್ವಿತೀಯ ಸ್ಥಾನ, ಕಥೆ ಹೇಳುವ ಸ್ಪರ್ಧೆಯಲ್ಲಿ ಅಲೀನಾ ಬೆಳಗಾಂ ದ್ವಿತೀಯ ಸ್ಥಾನ, ಚಿತ್ರಕಲೆಯಲ್ಲಿ ಫಾಯಿಝು ನರಗುಂದ ದ್ವಿತೀಯ ಸ್ಥಾನ, ಅಭಿನಯ ಗೀತೆಯಲ್ಲಿ ಅಫ್ರಾಹ್ ಇರಕಲ್ ದ್ವಿತೀಯ ಸ್ಥಾನ, ಹಿಂದಿ ಹಾಗೂ ಕನ್ನಡ ಕಂಠಪಾಠದಲ್ಲಿ ಮಹರಿನ ಕಾತರಕಿ ದ್ವಿತೀಯ ಸ್ಥಾನ, ಅಭಿನಯ ಗೀತೆಯಲ್ಲಿ ಜೋಯಾ ಹುಬ್ಬಳ್ಳಿ ದ್ವಿತೀಯ ಸ್ಥಾನ, ಹಿಂದಿ ಭಾಷಣದಲ್ಲಿ ಸಾದಿಯಾ ಬಬಬರ್ಚಿ ದ್ವಿತೀಯ ಸ್ಥಾನ, ಗಝುಲ್ ಸ್ಪರ್ಧೆಯಲ್ಲಿ ಶಾಫಿನ್ ಕಿತ್ತೂರ ದ್ವಿತೀಯ ಸ್ಥಾನ, ಧಾರ್ಮಿಕ ಪಠಣ ಆರ್ಶಿಯಾ ನೂರಿ ಕಲ್ಯಾಣಿ ತೃತೀಯ, ಇಂಗ್ಲಿಷ್ ಭಾಷಣದಲ್ಲಿ ಆರ್ಶಿಯಾ ಕಲ್ಯಾಣಿ ತೃತೀಯ, ಕವನ ವಾಚನದಲ್ಲಿ ಶೈಲಾ ರಾಮೇನ್ಹಳ್ಳಿ ತೃತೀಯ, ಸಂಸ್ಕೃತಿ ಧಾರ್ಮಿಕ ಪಠಣದಲ್ಲಿ ಶೈಲಾ ರಮೇನಹಳ್ಳಿ ತೃತೀಯ, ರಂಗೋಲಿ ಸ್ಪರ್ಧೆಯಲ್ಲಿ ಸಾದಿಯ ಬಬರ್ಚಿ ತೃತೀಯ, ಆಂಗ್ಲ ಬಾಷೆಯಲ್ಲಿ ಕಥೆ ಹೇಳುವುದರಲ್ಲಿ ರಶೀದಾ ಕಾಗದಗಾರ ತೃತೀಯ, ಜಾನಪದ ನೃತ್ಯ ಸ್ಪರ್ಧೆಯಲ್ಲಿ ಶಾಫೀನ್ ಮತ್ತು ಸಂಗಡಿಗರು ತೃತೀಯ ಸ್ಥಾನ ಪಡೆದು ಶಾಲೆ ಹಾಗೂ ಸಂಸ್ಥೆಗೆ ಕೀರ್ತಿ ತಂದಿದ್ದಾರೆ.

ಸಾಧನೆಗೈದ ಪ್ರತಿಭೆಗಳಿಗೆ ಹಾಗೂ ತರಬೇತಿ ನೀಡಿದ ಎಲ್ಲ ಗುರುಮಾತೆಯರಿಗೆ ಸಂಸ್ಥೆಯ ಅಧ್ಯಕ್ಷರಾದ ಜುನೇದ ಉಮಚಗಿಯವರು ಅಭಿನಂದನೆ ಸಲ್ಲಿಸಿದ್ದಾರೆ.

**ಜಿಲ್ಲಾ ಪ್ರಥಮ ಮಕ್ಕಳ ಶರಣ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿ ಪ್ರಣತಿ ಗಡಾದ ಆಯ್ಕೆ**

# ಪ್ರಣತಿಯ ಆಯ್ಕೆ ಸಮ್ಮೇಳನದ ಘನತೆ ಹೆಚ್ಚಿಸಿದೆ

■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿಯ ಬಹುಮುಖ ಪ್ರತಿಭೆಯ ಪ್ರತಿಭಾವಂತ ಬಾಲ ಕವಿಯತ್ರಿ, ನಗರದ ಕೆ.ಎಲ್.ಇ ಶಾಲೆಯ 10ನೇ ತರಗತಿ ವಿದ್ಯಾರ್ಥಿನಿ ಪ್ರಣತಿ ಆರ್.ಗಡಾದರನ್ನು ಡಿ. 20ರಂದು ಸುಕ್ಷೇತ್ರ ಬಳಗಾನೂರಿನಲ್ಲಿ ಜರುಗಲಿರುವ ಗದಗ ಜಿಲ್ಲಾ ಪ್ರಥಮ ಮಕ್ಕಳ ಶರಣ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರನ್ನಾಗಿ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು ಹಾಗೂ ಕದಳಿ ಮಹಿಳಾ ವೇದಿಕೆ ಸರ್ವಾನುಮತದಿಂದ ಆಯ್ಕೆ ಮಾಡಿದೆ. ತನ್ನಿಮಿತ್ತ ಸಮ್ಮೇಳನದ ಸರ್ವಾಧ್ಯಕ್ಷರಿಗೆ ಅಧಿಕೃತ ಆಮಂತ್ರಣ ಕೊಡುವ ಕಾರ್ಯಕ್ರಮ ನಗರದ ಪ್ರಗತಿ ಗಡಾದರ ಮನೆಯಲ್ಲಿ ಜರುಗಿತು.



ಈ ಸಂದರ್ಭದಲ್ಲಿ ಜಿಲ್ಲಾ ಕದಳಿ ಮಹಿಳಾ ವೇದಿಕೆಯ ಅಧ್ಯಕ್ಷರಾದ ಪ್ರೊ. ಸುಧಾ ಹುಚ್ಚಣ್ಣವರ ಮಾತನಾಡಿ, ತನ್ನ 6ನೇ ವಯಸ್ಸಿನಲ್ಲಿಯೇ ಬರವಣಿಗೆಯನ್ನು ಪ್ರಾರಂಭಿಸಿ ಅನೇಕ ಶಿಶು ಪ್ರಾಸ, ಮಕ್ಕಳ ಕವಿತೆ, ಮಕ್ಕಳ ಕಥೆ, ಲೇಖನ, ಚುಟುಕು ವಚನಗಳನ್ನು ಬರೆದು ಅನೇಕ ಬಹುಮಾನ–ಪ್ರಶಸ್ತಿಗಳನ್ನು ಪಡೆದಿರುವ ಪ್ರಣತಿ ಗಡಾದ ಬಹುಮುಖ ಪ್ರತಿಭೆಯ ಬಾಲಕಿ. ವಿಶ್ವ ವಿಖ್ಯಾತ ಮೈಸೂರು ದಸರಾ ಕವಿಗೋಷ್ಠಿ, ಅಖಿಲ ಭಾರತ ಪ್ರಥಮ ಮಕ್ಕಳ ಸಾಹಿತ್ಯ ಸಮ್ಮೇಳನದ ಕವಿಗೋಷ್ಠಿ, ಕೇರಳ ರಾಜ್ಯ ಪ್ರಥಮ ಮಕ್ಕಳ ಸಾಹಿತ್ಯ ಸಮ್ಮೇಳನದ ಕವಿಗೋಷ್ಠಿ, ದೆಹಲಿಯಲ್ಲಿ ಜರುಗಿದ ಹೊರನಾಡ ಪ್ರಥಮ ಮಕ್ಕಳ ಸಾಹಿತ್ಯ ಸಮ್ಮೇಳನದ ವಿಚಾರಗೋಷ್ಠಿ ಸೇರಿದಂತೆ ಅನೇಕ ಪ್ರತಿಷ್ಠಿತ ಸಮ್ಮೇಳನಗಳಲ್ಲಿ ತನ್ನದೇ ಆದ ಪ್ರತಿಭೆಯಿಂದ ಗಮನ ಸೆಳೆದಿರುವ ಪ್ರಣತಿ ಆರ್.ಗಡಾದ ಸಮ್ಮೇಳನದ ಸರ್ವಾಧ್ಯಕ್ಷೆಯಾಗಿ ಆಯ್ಕೆಯಾಗಿರುವುದು ನಿಜಕ್ಕೂ ಸಮ್ಮೇಳನದ ಘನತೆಯನ್ನು ಹೆಚ್ಚಿಸಿದೆ ಎಂದರು. ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಕೆ.ಎ. ಬಳಿಗೇರ ಎಲ್ಲ ಪದಾಧಿಕಾರಿಗಳೊಂದಿಗೆ ಪ್ರಣತಿಯವರಿಗೆ ಶಾಲು ಹೊದಿಸಿ ಸನ್ಮಾನಿಸಿ, ಆಮಂತ್ರಣ ಪತ್ರಿಕೆಯನ್ನು ಅಧಿಕೃತವಾಗಿ ಆಹ್ವಾನಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಕೆ.ಎ. ಬಳಿಗೇರ, ಮಕ್ಕಳ ಸಾಹಿತ್ಯ ಹಾಗೂ ಶರಣ ಸಾಹಿತ್ಯದಲ್ಲಿ ರಾಜ್ಯದಲ್ಲಿಯೇ ತನ್ನ ಪ್ರತಿಭೆಯ ಮೂಲಕ ಗುರುತಿಸಿಕೊಂಡಿರುವ ಕುಮಾರಿ ಪ್ರಣತಿ ಗಡಾದ ನಮ್ಮ ಜಿಲ್ಲೆಯ ಅಪರೂಪದ ಪ್ರತಿಭೆಯಾಗಿದ್ದು, ರಾಜ್ಯದಲ್ಲಿಯೇ ಪ್ರಪ್ರಥಮ ಬಾರಿಗೆ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನಿಂದ ನಡೆಯುತ್ತಿರುವ ಜಿಲ್ಲಾ ಪ್ರಥಮ ಮಕ್ಕಳ ಶರಣ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷೆಯಾಗಿ ಆಯ್ಕೆಯಾಗಿರುವುದು ಗದಗ ಜಿಲ್ಲೆಗೆ ಸಂದ ದೊಡ್ಡ ಗೌರವವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ತಾಲೂಕು ಶರಣ ಸಾಹಿತ್ಯ ಪರಿಷತ್ತಿನ ಕಾರ್ಯದರ್ಶಿ ಬೂದಪ್ಪ ಅಂಗಡಿ, ಗದಗ ತಾಲೂಕಾ ಕದಳಿ ಮಹಿಳಾ ವೇದಿಕೆ ಅಧ್ಯಕ್ಷೆ ಸುಲೋಚನಾ ಐಹೊಳೆ, ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಪದಾಧಿಕಾರಿಗಳಾದ ಡಿ.ಎಸ್. ಬಾಪುರೆ, ಪ್ರೊ. ಶಕುಂತಲಾ ಸಿಂಧೂರ್, ಬಿ.ಕೆ. ನಿಂಬನಗೌಡ್ರ, ಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಡಾ. ರಾಜೇಂದ್ರ ಎಸ್. ಗಡಾದ, ಜ್ಯೋತಿ ಲೋಣಿ ಮುಂತಾದವರಿದ್ದರು.

# ಗ್ರಾಮೀಣ ಸೊಗಡಿನ ರೈತರ ಹಬ್ಬ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಉತ್ತರ ಕರ್ನಾಟಕದ, ಅದರಲ್ಲೂ ಗದಗ ಜಿಲ್ಲೆಯ ಗದಗ ತಾಲೂಕಿನ ತಿಮ್ಮಾಪೂರ ಗ್ರಾಮದಲ್ಲಿ ಅತಿ ಹೆಚ್ಚು ಎರೆ ಭೂಮಿಯನ್ನು ಹೊಂದಿದ್ದು, ಈ ಬಾರಿ ಡಿ. 19ರ ಎಳ್ಳ ಅಮಾವಾಸ್ಯೆಯಂದು ಭೂಮಿಪೂಜೆ ನೆರವೇರಿಸುತ್ತಾರೆ. ಯಾವುದೇ ಜಾತಿ–ಮತ ಭೇದವಿಲ್ಲದೆ ಆಚರಣೆ ಮಾಡುವ ಅನ್ನದಾತರ ಹಬ್ಬ ಇದಾಗಿದೆ.

ಎಳ್ಳು ಅಮವಾಸ್ಯೆಗೆ ಇನ್ನು ಐದಾರು ದಿನ ಇರುವಾಗಲೇ ಚಕ್ಕಡಿ, ಎತ್ತು ಹಾಗೂ ಟ್ರ್ಯಾಕ್ಟರ್‌ಗಳನ್ನು ಸಿಂಗರಿಸುವ ಹುಮ್ಮಸ್ಸಿನಲ್ಲಿದ್ದರೆ, ಮಹಿಳೆಯರು ಬಗೆ ಬಗೆಯ ಅಡುಗೆಯನ್ನು ತಯಾರು ಮಾಡುವ ಸಂಭ್ರಮದಲ್ಲಿರುತ್ತಾರೆ. ಎಳ್ಳ ಅಮವಾಸ್ಯೆಯ ದಿನ ಅನ್ನದಾತರು ಆದ್ಯ ದೇವತೆಯಾದ ಭೂತಾಯಿಗೆ ಸೀಮಂತ ಕಾರ್ಯ ಮಾಡುವುದು ಉತ್ತರ ಕರ್ನಾಟಕದ ರೈತರ ಪದ್ಧತಿಯಾಗಿದೆ.



ಈ ಸಂದರ್ಭದಲ್ಲಿ ರೈತರು ತಮ್ಮ ತಮ್ಮ ಹೊಲದಲ್ಲಿರುವ ಬನ್ನಿ ಮಹಾಕಾಳಿಗೆ ಪೂಜೆ ಸಲ್ಲಿಸಿ ಐದು ಕಲ್ಲುಗಳನ್ನು ಇಟ್ಟು ಅವುಗಳನ್ನು ಪಂಚಪಾಂಡವರೆಂದು ಹಾಗೂ ಅದರ ಹಿಂದಿನ ಒಂದು ಕಲ್ಲನ್ನು ಇಟ್ಟು ಮಹಾ ಕಳ್ಳನೆಂದು ಹೇಳುತ್ತಾರೆ. ಎಲ್ಲವುಗಳಿಗೆ ವಿಭೂತಿ, ಕುಂಕುಮ ಹಚ್ಚಿ ಮರಕ್ಕೆ ಸುಣ್ಣದಿಂದ ಐದು ಸುತ್ತು ಗೆರೆ ಬರೆದು ಪೂಜಿಸಿ, ನೈವೇದ್ಯ ಹಿಡಿದು ಹೊಲದ ಸುತ್ತ ಚರಗವನ್ನು ಚೆಲ್ಲುತ್ತಾರೆ.

ನಂತರ ಎಲ್ಲರೂ ಸೇರಿ ಹೊಟ್ಟೆ ತುಂಬ ಭೋಜನ ಸ್ವೀಕರಿಸಿ ಬೆಳೆದ ಬೆಳೆಯನ್ನೆಲ್ಲ ಅಡ್ಡಾಡಿ, ಮರದ ಕೆಳಗೆ ವಿಶ್ರಾಂತಿ ತೆಗೆದುಕೊಂಡರೆ, ಮಕ್ಕಳು ತಮ್ಮ ಹಾಗೂ ಅವರಿವರ ಹೊಲದಲ್ಲಿ ಬೆಳೆದ ಕಡಲೆಕಾಯಿಯನ್ನು ಕಿತ್ತು ತಿಂದು ಸಂಭ್ರಮಿಸುತ್ತಾರೆ. ಈ ಆಚರಣೆ ಗ್ರಾಮೀಣ ಸೊಗಡು ಸಂಭ್ರಮವನ್ನು ಬಿಂಬಿಸುತ್ತಿದೆ ಎನ್ನುತ್ತಾರೆ ರೈತ ಸಂಘದ ಗದಗ ಜಿಲ್ಲಾಧ್ಯಕ್ಷ ಯಲ್ಲಪ್ಪ ಎಚ್.ಬಾಬರಿ.

# ಗುರುವಂದನಾ ಕಾರ್ಯಕ್ರಮ ಡಿ.21ಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಹುಲಕೋಟಿಯ ಎಸ್‌ಆರ್‌ಎಜಿಎ ಪ್ರೌಢಶಾಲೆಯ 1994–95ನೇ ಸಾಲಿನ ಹಳೆಯ ವಿದ್ಯಾರ್ಥಿಗಳಿಂದ ಗುರುವಂದನಾ ಕಾರ್ಯಕ್ರಮವನ್ನು ಡಿ. 21ರಂದು ಬೆಳಿಗ್ಗೆ 10 ಗಂಟೆಗೆ ಶ್ರೀ ಬಸವೇಶ್ವರ ದೇವಸ್ಥಾನದಲ್ಲಿ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗದಗ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷರಾದ ಕೆ.ಎಚ್. ಪಾಟೀಲ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಹುಲಕೋಟಿ ಗ್ರಾಮ ಪಂಚಾಯಿತಿಯ ಮಾಜಿ ಅಧ್ಯಕ್ಷರು ಹಾಗೂ ಹಾಲಿ ಸದಸ್ಯರಾದ ಸಿ.ಬಿ. ಕರಿಕಟ್ಟಿ ಆಗಮಿಸುವರು. ಕಾರ್ಯಕ್ರಮದಲ್ಲಿ ಶಾಲೆಯ ಹಳೆಯ ಶಿಕ್ಷಕರಿಗೆ ಹಾಗೂ ಸಿಬ್ಬಂದಿಗಳಿಗೆ ಸನ್ಮಾನ ಕಾರ್ಯಕ್ರಮ ಜರುಗಲಿದೆ ಎಂದು ಕಾರ್ಯಕ್ರಮದ ಆಯೋಜಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವೈದ್ಯಕೀಯ ಸಂಸ್ಥೆಗಳ ನೋಂದಣಿ ಸರಳೀಕರಣ ವಿಧೇಯಕಕ್ಕೆ ಅಂಗೀಕಾರ

■ ವಿಜಯಸಾಕ್ಷಿ ಸುದ್ದಿ, ಬೆಳಗಾವಿ–ಸುವರ್ಣಸೌಧ

ಮಾನಸಿಕ ಆರೋಗ್ಯ ಸಂಸ್ಥೆಗಳನ್ನು ಖಾಸಗಿ ವೈದ್ಯಕೀಯ ಸಂಸ್ಥೆಯ ಪರಿಭಾಷೆಯೊಳಗೆ ಸೇರಿಸಲು ಹಾಗೂ ಇತರೆ ವೈದ್ಯಕೀಯ ಸಂಸ್ಥೆಗಳ ನೋಂದಣಿಯನ್ನು ಸರಳಗೊಳಿಸುವ ಉದ್ದೇಶದಿಂದ ರೂಪಿಸಲಾದ ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ ತಿದ್ದುಪಡಿ ವಿಧೇಯಕಕ್ಕೆ ವಿಧಾನಸಭೆಯಲ್ಲಿ ಅಂಗೀಕಾರ ದೊರಕಿತು.

ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆಯುತ್ತಿರುವ ಚಳಿಗಾಲದ ಅಧಿವೇಶನದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಅವರು ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ ತಿದ್ದುಪಡಿ ವಿಧೇಯಕವನ್ನು ಮಂಡಿಸಿ, ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ ಅಧಿನಿಯಮ–2007ನ್ನು ತಿದ್ದುಪಡಿ ಮಾಡಲು ಉದ್ದೇಶಿಸಿದ್ದು, ಪ್ರಸ್ತುತ ಖಾಸಗಿ ವೈದ್ಯಕೀಯ ಸಂಸ್ಥೆಗಳು ಈ ಅಧಿನಿಯಮದಡಿ ಸೇರ್ಪಡೆಗೊಂಡಿರಲಿಲ್ಲ. ಇದರಿಂದಾಗಿ ಕೆಲವು ನಿಯಮಗಳನ್ನು ಪಾಲಿಸುವುದರಲ್ಲಿ ತೊಡಕಿತ್ತು.

ಹೀಗಾಗಿ ಮಾನಸಿಕ ಆರೋಗ್ಯ ಸಂಸ್ಥೆಗಳನ್ನೂ ಕೂಡ ಅಧಿನಿಯಮದಡಿ ಖಾಸಗಿ ವೈದ್ಯಕೀಯ ಸಂಸ್ಥೆಯ ಪರಿಭಾಷೆಯೊಳಗೆ ಸೇರ್ಪಡೆಗೊಳಿಸಲಾಗುತ್ತಿದೆ.

ಅಲ್ಲದೆ ಖಾಸಗಿ ವೈದ್ಯಕೀಯ ಸಂಸ್ಥೆಗಳಿಗೆ ಕೆಪಿಎಂಇ ಸಮಿತಿಯಡಿ ನೋಂದಣಿ ಮತ್ತು ಪರವಾನಗಿ ಪಡೆಯುವ ನಿಟ್ಟಿನಲ್ಲಿ ವಿಳಂಬವಾಗುತ್ತಿದೆ ಎಂಬ ದೂರುಗಳು ಕೇಳಿಬರುತ್ತಿದ್ದವು. ಹೀಗಾಗಿ ತಾತ್ಕಾಲಿಕ ನೋಂದಣಿ ಪ್ರಮಾಣಪತ್ರ ಮಂಜೂರು ಮಾಡಲು ಅಥವಾ ನವೀಕರಣ ಮಾಡುವುದು ಸೇರಿದಂತೆ ವಿವಿಧ ಪ್ರಕ್ರಿಯೆಗಳ ಸರಳೀಕರಣಕ್ಕಾಗಿ ಈ ಅಧಿನಿಯಮಕ್ಕೆ ತಿದ್ದುಪಡಿ ತರಲಾಗುತ್ತಿದೆ.

ಖಾಸಗಿ ವೈದ್ಯಕೀಯ ಸಂಸ್ಥೆಗಳ ನೋಂದಣಿ ಮತ್ತು ಕುಂದುಕೊರತೆ ಪರಿಹಾರ ಪ್ರಾಧಿಕಾರಕ್ಕೆ ನಾಮನಿರ್ದೇಶನ ಮಾಡಲು ವಿಧೇಯಕದಲ್ಲಿ ಅವಕಾಶ ಮಾಡಿಕೊಡಲಾಗಿದೆ ಎಂದು ಹೇಳಿದರು.

ಸದನದ ಸದಸ್ಯರುಗಳ ಚರ್ಚೆಯ ಬಳಿಕ ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ ತಿದ್ದುಪಡಿ ವಿಧೇಯಕಕ್ಕೆ ವಿಧಾನಸಭೆ ಅಂಗೀಕಾರ ನೀಡಲಾಯಿತು.

# ಮುಂದಿನ ಶೈಕ್ಷಣಿಕ ವರ್ಷದೊಳಗೆ 11 ಸಾವಿರ ಶಿಕ್ಷಕರ ನೇಮಕಾತಿ ಪೂರ್ಣ

■ ವಿಜಯಸಾಕ್ಷಿ ಸುದ್ದಿ, ಬೆಳಗಾವಿ ಸುವರ್ಣಸೌಧ

ಬರುವ ಶೈಕ್ಷಣಿಕ ವರ್ಷದೊಳಗೆ 11 ಸಾವಿರ ಶಿಕ್ಷಕರ ನೇಮಕಾತಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗುವುದು ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಎಸ್. ಮಧು ಬಂಗಾರಪ್ಪ ಹೇಳಿದರು.

ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆಯುತ್ತಿರುವ ಚಳಿಗಾಲದ ವಿಧಾನಮಂಡಲದ ಅಧಿವೇಶನದಲ್ಲಿ ವಿಧಾನಸಭೆಯ ಪ್ರಶ್ನೋತ್ತರ ಕಲಾಪದಲ್ಲಿ ಬೆಳ್ತಂಗಡಿ ಶಾಸಕ ಹರೀಶ ಪೂಂಜ ಅವರು ರಾಜ್ಯದಲ್ಲಿ ಖಾಲಿ ಇರುವ ಶಿಕ್ಷಕರ ನೇಮಕಾತಿ ಹಾಗೂ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಅತಿಥಿ ಶಿಕ್ಷಕರ ಕುರಿತು ಕೇಳಿದ ಪ್ರಶ್ನೆಗೆ ಉತ್ತರಿಸಿ ಮಾತನಾಡಿದರು.



ರಾಜ್ಯದಲ್ಲಿ 41,088 ಸರ್ಕಾರಿ ಪ್ರಾಥಮಿಕ ಶಾಲೆಗಳಿದ್ದು, ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ 178935 ಹುದ್ದೆಗಳು ಮಂಜೂರಾಗಿದೆ. ಈ ಪೈಕಿ 133345 ಹುದ್ದೆಗಳು ಭರ್ತಿಯಾಗಿದ್ದು, 45590 ಹುದ್ದೆಗಳು ಖಾಲಿ ಇವೆ. ಖಾಲಿ ಇರುವ ಹುದ್ದೆಗಳನ್ನು ಹಂತ ಹಂತವಾಗಿ ನೇಮಕಾತಿ ಮಾಡಲು ಈಗಾಗಲೇ ಕ್ರಮ ವಹಿಸಲಾಗಿದೆ ಎಂದು ವಿವರಿಸಿದರು.

ರಾಜ್ಯದಲ್ಲಿ 5024 ಸರ್ಕಾರಿ ಪ್ರೌಢಶಾಲೆಗಳಿದ್ದು, ಈ ಪ್ರೌಢಶಾಲೆಗಳಿಗೆ 44,144 ಹುದ್ದೆಗಳು ಮಂಜೂರಾಗಿರುತ್ತವೆ. ಈ ಪೈಕಿ 32010 ಹುದ್ದೆಗಳು ಭರ್ತಿಯಾಗಿದ್ದು 12,134 ಹುದ್ದೆಗಳು ಖಾಲಿ ಇರುತ್ತವೆ. ಪ್ರಸ್ತುತ ಖಾಲಿ ಇರುವ ಹುದ್ದೆಗಳಿಗೆ ಎದುರಾಗಿ 2025–2026ನೇ ಶೈಕ್ಷಣಿಕ ಸಾಲಿಗೆ ಪ್ರಾಥಮಿಕ ಶಾಲೆಗಳಲ್ಲಿ 40 ಸಾವಿರ ಮತ್ತು ಪ್ರೌಢಶಾಲೆಗಳಲ್ಲಿ 11 ಸಾವಿರ ಒಟ್ಟಾರೆಯಾಗಿ 51 ಸಾವಿರ ಅತಿಥಿ ಶಿಕ್ಷಕರನ್ನು ನೇಮಕಾತಿ ಮಾಡುವ ಮೂಲಕ ಶಿಕ್ಷಕರ ಕೊರತೆಯನ್ನು ಸರಿದೂರಿಸಲಾಗಿದೆ.

ಅಲ್ಲದೇ ವಿಕಲಚೇತನ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡುವ ದೃಷ್ಟಿಯಿಂದ ವಿಶೇಷ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲಾಗಿದೆ ಎಂದು ಸಚಿವರು ವಿವರಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka